ಸಂಪುಟ : 10 ಸಂಚಿಕೆ: 218 ಪುಟ : 4+2 ಬೆಲೆ: 3.00 ಗುರುವಾರ ಅಕ್ಟೋಬರ್ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 218 Pages : 4+2 Price : 3.00 Thursday October 09 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಭಯ ಜಗದ್ಗುರುಗಳ ಪುಣ್ಯಸ್ಮರಣೋತ್ಸವ ಇಂದು





■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಭಾಪೂರ ರಸ್ತೆಯಲ್ಲಿರುವ ಶ್ರೀ ಜಗದ್ಗುರು ಪಂಚಾಚಾರ್ಯ ವೇದ ಸಂಸ್ಕೃತ ಪಾಠಶಾಲೆಯಲ್ಲಿ ಅ.9ರಂದು ಬೆಳಿಗ್ಗೆ 11.30ಕ್ಕೆ ಶ್ರೀಮದ್ ರಂಭಾಪುರಿ ಲಿ. ಶ್ರೀ 1008 ಜಗದ್ಗುರು ವೀರಗಂಗಾಧರ ಶಿವಾಚಾರ್ಯ ಭಗವತ್ಪಾದಂಗಳವರ ಹಾಗೂ ಶ್ರೀಮತ್ ಕಾಶೀ ಲಿಂ. ಶ್ರೀ 1008 ಜಗದ್ಗುರು ವಿಶ್ವೇಶ್ವರ ಶಿವಾಚಾರ್ಯ ಭಗವತ್ಪಾದಂಗಳವರ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ ನೆರವೇರಲಿದೆ.

ಬೆಳಿಗ್ಗೆ ಶ್ರೀ ಕಾಶಿ ವಿಶ್ವನಾಥನಿಗೆ ಪಾಠಶಾಲಾ ವಟುಗಳಿಂದ ಮಹಾ ರುದ್ರಾಭಿಷೇಕ, ಉಭಯ ಜಗದ್ಗುರುಗಳವರ ಭಾವಚಿತ್ರಕ್ಕೆ ಮಹಾಪೂಜೆ, ಅಷ್ಟೋತ್ತರ ಶತ ನಾಮಾವಳಿ, ಮಹಾಮಂಗಳಾರುತಿ ಪೂಜೆಗಳು ನೆರವೇರಲಿವೆ. ಶ್ರೀ ಜಗದ್ಗುರು ಪಂಚಾಚಾರ್ಯ ವೇದ ಸಂಸ್ಕೃತ ಪಾಠಶಾಲೆ, ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಸಂಘ, ಶ್ರೀ ಜಗದ್ಗುರು ವಿಶ್ವಾರಾಧ್ಯ ಜ್ಞಾನಾಮೃತ ಸಮಿತಿಯ ಎಲ್ಲ ಪದಾಧಿಕಾರಿಗಳು, ಸರ್ವ ಸದಸ್ಯರು ಹಾಗೂ ಪೀಠಾಭಿಮಾನಿಗಳು ಆಗಮಿಸಿ ಉಭಯ ಜಗದ್ಗುರುಗಳವರ ಆಶೀರ್ವಾದವನ್ನು ಪಡೆಯಬೇಕೆಂದು ಪಾಠಶಾಲಾ ಪ್ರಕಟಣೆ ತಿಳಿಸಿದೆ.

### ಕಿತ್ತೂರು ಕರ್ನಾಟಕದ ವಿಭಾಗದ 2026-27ನೇ ಸಾಲಿನ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಕೆಯ ಪ್ರಗತಿ ಪರಿಶೀಲನೆ ಸಭೆ

# ವಿಕೇಂದ್ರೀಕರಣ ವ್ಯವಸ್ಥೆ ಸಮರ್ಪಕವಾಗಿ ಅನುಷ್ಠಾನವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ ತಿಂಗಳಲ್ಲಿ ಬಜೆಟ್ ಮಂಡನೆ ಆಗಲಿದೆ. ಅದಕ್ಕೆ ಪೂರ್ವದಲ್ಲಿ ನವೆಂಬರ್ ಒಳಗಾಗಿ ಗ್ರಾ.ಪಂ, ವಾರ್ಡ್ ಯೋಜನೆಗಳ ಕರಡು ಪ್ರತಿಗಳಿಗೆ ಅನುಮೋದನೆ ಪಡೆಯಬೇಕು ಎಂದು ಮುಖ್ಯಮಂತ್ರಿಗಳು ನಿರ್ದೇಶನ ನೀಡಿದ್ದರು. ಆದರೆ, ಇದುವರೆಗೂ ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ. ಇದಕ್ಕೆ ಸರ್ಕಾರಿ, ರಾಜಕಾರಣ, ಆಡಳಿತ ವ್ಯವಸ್ಥೆಯೇ ಕಾರಣವೆಂದು ರಾಜ್ಯ ನೀತಿ ಮತ್ತು ಯೋಜನೆ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ ಹೇಳಿದರು.

ಬುಧವಾರ ಗದಗ ನಗರದ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿ.ವಿಯಲ್ಲಿ ಜರುಗಿದ ರಾಜ್ಯ ಸರ್ಕಾರದ ಮಹತ್ವದ ವಿಕೇಂದ್ರೀಕರಣ ಯೋಜನೆ ಅನುಷ್ಠಾನದ ಭಾಗವಾಗಿ ಕಿತ್ತೂರು ಕರ್ನಾಟಕದ ಎಲ್ಲ ಜಿಲ್ಲೆಗಳ 2026–27ನೇ ಸಾಲಿನ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಕೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ವಿಕೇಂದ್ರೀಕರಣ ವ್ಯವಸ್ಥೆ ರಾಜ್ಯದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ. ಕೇಂದ್ರೀಕರಣ ವ್ಯವಸ್ಥೆಯಿಂದ ಸರ್ವಾಧಿಕಾರತ್ವ ಅಧಿಕಗೊಳ್ಳುತ್ತದೆ. ಕೇಂದ್ರೀಕರಣ ವ್ಯವಸ್ಥೆಯಿಂದ ಗ್ರಾಮೀಣ ಮತ್ತು ನಗರದ ನಡುವೆ ಕಂದಕ ಸೃಷ್ಟಿ ಆಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲಾ ಯೋಜನಾ ಸಮಿತಿಯು ಅ.10ರ ಒಳಗಾಗಿ ವಾರ್ಡ್‌ವಾರು, ತಾ.ಪಂ, ಜಿ.ಪಂನಲ್ಲಿ ಸಭೆ ನಡೆಸಿ ಯೋಜನೆಗಳ ಕುರುಡು ಪ್ರತಿಗಳನ್ನು ವಿಕೇಂದ್ರೀಕರಣ ಸಮಿತಿಗೆ ಸಲ್ಲಿಕೆ ಮಾಡಬೇಕು ಎಂದು ಸಿಎಂ ಸಿದ್ದರಾಮಯ್ಯ ನಿರ್ದೇಶನ ನೀಡಿದ್ದರು. ಕೇವಲ ಇನ್ನೂ ಎರಡು ದಿನ ಬಾಕಿ ಇರುವುದರಿಂದ ಚಮತ್ಕಾರ ಮಾಡಲು ಸಾಧ್ಯವಿಲ್ಲ. 15 ದಿನಗಳ ಒಳಗಾಗಿ ವಾರ್ಡ್‌ವಾರು, ತಾ.ಪಂ, ಜಿ.ಪಂಗಳಿಂದ ಅಭಿವೃದ್ಧಿ ಯೋಜನೆಗಳ ಕುರಿತು ಕರಡು ಪ್ರತಿ ಪಡೆದು ಸಭೆ ನಡೆಸಿ ಜಿಲ್ಲಾಡಳಿತ ಮತ್ತು ಸರ್ಕಾರಕ್ಕೆ ಸಲ್ಲಿಸಬೇಕು ಎಂದು ಹೇಳಿದರು.

ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ ಚೌದರಿ ಪ್ರಾಸ್ತಾವಿಕ ಮಾತನಾಡಿ, ಪಂಚಾಯತ್ ರಾಜ್ ಇಲಾಖೆ ಕಾನೂನಿನ ಪ್ರಕಾರ ವಿಕೇಂದ್ರೀಕರಣ ಅನುಷ್ಠಾನ ಪರಿಣಾಮಕಾರಿಯಾಗಿ ಆಗಬೇಕಿದೆ ಎಂದರು.

ಮೊದಲು ಮೇಲಿನ ಹಂತದಿಂದ (ಜಿಲ್ಲಾಡಳಿತ) ಕರಡು ಯೋಜನೆ ಸಿದ್ಧಗೊಂಡು ಕೆಳಗಿನ ಹಂತದಲ್ಲಿ (ಗ್ರಾ.ಪಂ, ವಾರ್ಡ್) ಯೋಜನೆ ಜಾರಿ ಆಗುತ್ತಿತ್ತು. ಆದರೆ ಈಗ, ಕೆಳಗಿನ ಹಂತದಿಂದ ಕರಡು ಯೋಜನೆ ಸಿದ್ಧಗೊಂಡು ಮೇಲಿನ ಹಂತಕ್ಕೆ ▶▶3ನೇ ಪುಟಕ್ಕೆ

> ರಾಜ್ಯ ವಿಕೇಂದ್ರೀಕರಣ ಮತ್ತು ಯೋಜನೆ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಮಾತನಾಡಿ, ಮೊದಲು ಮಂತ್ರಿಗಳು ಹೇಳಿದಂತೆ ಸರ್ಕಾರ ನಡೆಯುತ್ತಿತ್ತು. ರಾಮಕೃಷ್ಣ ಹೆಗಡೆ ಅವರ ಕಾಲದಲ್ಲಿ ಶಾಸಕರು ಹೇಳಿದಂತೆ ನಡೆಯುತ್ತಿತ್ತು. ಈಗ ಜನರಿಂದ ಸರ್ಕಾರ ನಡೆಯುವಂತೆ ಯೋಜನೆಗಳು ಸಿದ್ಧಗೊಳ್ಳಬೇಕು. ಜಿ.ಪಂ ಸಿಇಓಗಳು ಬ್ರಿಟೀಷ್ ಅಧಿಕಾರಿಗಳಲ್ಲ. ಐಎಎಸ್ ಅಧಿಕಾರಿಗಳು ಸಂವಿಧಾನದ ಅಡಿಯಲ್ಲಿ ಕೆಲಸ ಮಾಡಬೇಕು. ಕೇವಲ ಮಾರ್ಗಸೂಚಿಗಳು ಹೇಳಿದಂತೆ ಕೆಲಸ ಮಾಡುವುದಲ್ಲ. ಇರುವ ಕಾನೂನುಗಳ ಪಾಲನೆಯೊಂದಿಗೆ ಕಾರ್ಯಗಳಾಗಬೇಕು ಎಂದು ಹೇಳಿದರು.

## ಅಭಿಸಂಧಾನ ದಂಡದ ಶುಲ್ಕ ವಸೂಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಮಾಪನ ಶಾಸ್ತ್ರ ಸಹಾಯಕ ನಿಯಂತ್ರಕರು, ಗ್ರೇಡ್–2 ಗದಗ ಜಿಲ್ಲಾ ಕಚೇರಿಯ ಸೆಪ್ಟೆಂಬರ್–2025ರ ಅಂತ್ಯದವರೆಗೆ ಗದಗ ಜಿಲ್ಲೆಯಲ್ಲಿ ಒಟ್ಟು ರೂ. 59,16,653 ಸತ್ಯಾಪನೆ ಶುಲ್ಕ ಸಂಗ್ರಹಿಸಿದೆ.

ಕಿರಾಣಿ ವ್ಯಾಪಾರಸ್ಥರು, ನ್ಯಾಯ ಬೆಲೆ ಅಂಗಡಿಗಳು, ಮತ್ತು ಚಿಲ್ಲರೆ ವ್ಯಾಪಾರಸ್ಥರು ಹಾಗೂ ಇನ್ನಿತರ ಒಟ್ಟು 517 ಅಂಗಡಿಗಳ ತಪಾಸಣೆ ಮಾಡಿ, ತಪ್ಪಿತಸ್ಥರ ವಿರುದ್ಧ ಒಟ್ಟು 121 ಮೊಕದ್ದಮೆಗಳನ್ನು ಹೂಡಲಾಗಿದೆ. ಸದರಿ ಮೊಕದ್ದಮೆಗಳನ್ನು ಅಭಿಸಂಧಾನದ ಮೂಲಕ ಇತ್ಯರ್ಥ ಮಾಡಿ, ಸೆಪ್ಟೆಂಬರ್ 2025ರ ಅಂತ್ಯದವರೆಗೆ ಒಟ್ಟು ರೂ. 3,31,000 ಅಭಿಸಂಧಾನ ದಂಡದ ಶುಲ್ಕವನ್ನು ವಸೂಲು ಮಾಡಲಾಗಿದೆ.

ಯಾವುದೇ ತೂಕ ಮತ್ತು ಅಳತೆಗೆ ಸಂಬಂಧಿಸಿದಂತೆ ದೂರುಗಳಿದ್ದಲ್ಲಿ ಗ್ರಾಹಕರು ಸಹಾಯಕ ನಿರ್ದೇಶಕರು ಗ್ರೇಡ್–2 ಕಚೇರಿ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಸಂಕಣ್ಣವರ ಬಡಾವಣೆ ಹತ್ತಿರ, ಗದಗ ಈ ವಿಳಾಸಕ್ಕೆ ದೂರು ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮ್ಮೇಳನದಲ್ಲಿ ರಾಜ್ಯ ಪ್ರಧಾನ ಕಾಯದರ್ಶಿ ಅಕ್ಷಯ ಪಾಟೀಲ

# ಸಂವಿಧಾನ ಬದಲಾವಣೆ ಯಾರಿಂದಲೂ ಸಾಧ್ಯವಿಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ

ಯುವ ನಾಯಕ ರಾಹುಲ್ ಗಾಂಧಿ ಪ್ರಧಾನಿಯಾದರೆ ಮಾತ್ರ ಯುವಕರಿಗೆ ಉದ್ಯೋಗ ಸಿಗಲು ಸಾಧ್ಯ ಎಂದು ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥಗೌಡ ಹೇಳಿದರು.

ಅವರು ಬುಧವಾರ ಪಟ್ಟಣದ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಜರುಗಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

ಕಳೆದ 10 ವರ್ಷಗಳಿಂದ ದೇಶದಲ್ಲಿನ ವಿದ್ಯಾವಂತ ಯುವಕರಿಗೆ ಉದ್ಯೋಗ ಸಿಗುತ್ತಿಲ್ಲ. ಉದ್ಯೋಗ ನೀಡಿ ಎಂದು ಯುವಕರು ಕೇಳಿದರೆ ಕೇಂದ್ರ ಸರಕಾರಕ್ಕೆ ಹಿಂದೂ–ಮುಸ್ಲಿಂ ಎಂಬ ಪದಗಳು ನೆನಪಾಗುತ್ತವೆ. ಇದನ್ನು ಅಕ್ಷರಸ್ಥ ಯುವಕರು ಅರಿಯಬೇಕು. ವಿದ್ಯಾವಂತ ಯುವಕರು ದೇಶ ಕಂಡ ಅಪ್ರತಿಮ ಯುವ ನಾಯಕ ರಾಹುಲ್ ಗಾಂಧಿಯವರ ಬೆಂಬಲಕ್ಕೆ ನಿಲ್ಲಬೇಕು ಎಂದರು.

ದೇಶದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಸರಕಾರ ಆರ್‌ಎಸ್‌ಎಸ್ ಅಣತಿಯಂತೆ ನಡೆಯುತ್ತಿದೆ ಎನ್ನುವುದು ಭಾರತೀಯರಾದ ನಮಗೆಲ್ಲರಿಗೂ ತಿಳಿದಿರುವ ಸಂಗತಿ. ಆರ್‌ಎಸ್‌ಎಸ್ ಯಾವತ್ತಿಗೂ ವಿದ್ಯಾವಂತ ಯುವಕರ ಪರ ನಿಂತಿಲ್ಲ ಎನ್ನುವುದು ಕೂಡ ಸತ್ಯ. ಇಂದು ದೇಶ ಆರ್ಥಿಕ ಸವಾಲನ್ನು ಎದುರಿಸುತ್ತಿದೆ, ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ. ಹೀಗಿದ್ದರೂ ಸಹ ಕೇಂದ್ರ ಸರಕಾರ ಎಚ್ಚೆತ್ತುಕೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ವಹಿಸಿದ್ದರು. ಕಾರ್ಯಕ್ರಮಕ್ಕೂ ಮುನ್ನ ಕಾಂಗ್ರೆಸ್ ಪಕ್ಷದ ಯುವ ಕಾರ್ಯಕರ್ತರು ಅಬ್ಬಿಗೇರಿ ರಸ್ತೆಯಿಂದ ಬೈಕ್ ರ್‍ಯಾಲಿ ನಡೆಸಿದರು. ರಾಜ್ಯಾಧ್ಯಕ್ಷರೂ ಸೇರಿದಂತೆ ಪಕ್ಷದ ಯುವ ನಾಯಕರನ್ನು ತೆರದ ವಾಹನದಲ್ಲಿ ಮೆರವಣಿಗೆ ನಡೆಸಲಾಯಿತು. ಮುಖಂಡರು ಡಾ. ಬಿ.ಆರ್. ಅಂಬೇಡ್ಕರರ ಪುತ್ಥಳಿಗೆ ಹೂಮಾಲೆ ಹಾಕಿ ನಮಸ್ಕರಿಸಿದರು. ಶಾಸಕ ಜಿ.ಎಸ್. ಪಾಟೀಲ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ವ್ಹಿ.ಆರ್. ಗುಡಿಸಾಗರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ, ಸಿದ್ದಣ್ಣ ಬಂಡಿ, ಪರಶುರಾಮ ಅಳಗವಾಡಿ, ವ್ಹಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ವಿವೇಕ ಯಾವಗಲ್ಲ, ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ದೀಪಿಕಾ ರೆಡ್ಡಿ, ರವಿ ಕಿರಣ, ದೀಪಕಗೌಡ, ಎಸ್.ಎಚ್. ಸೋಂಪುರ, ಆನಂದ ಚಂಗಳಿ, ಅರ್ಜುನ ಪಾಟೀಲ, ಸೋಮು ನಾಗರಾಜ, ಸಂಜಯ ದೊಡ್ಡಮನಿ, ಅಸ್ಲಂ ಕೊಪ್ಪಳ, ಅಭಿಷೇಕ ನವಲಗುಂದ, ಮುತ್ತಣ್ಣ ನವಲಗುಂದ, ಯಲ್ಲಪ್ಪ ಕಿರೇಸೂರ, ಮಲಿಕ ಯಲಿಗಾರ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

> ರಾಜ್ಯ ಪ್ರಧಾನ ಕಾಯದರ್ಶಿ ಅಕ್ಷಯ ಪಾಟೀಲ ಮಾತನಾಡಿ, ಬಿಜೆಪಿ ಪಕ್ಷದ ಕೆಲ ನಾಯಕರು ದೇಶದ ಸಂವಿಧಾನವನ್ನು ಬದಲಾವಣೆ ಮಾಡುತ್ತೇವೆ ಎಂದು ಬಹಿರಂಗ ಹೇಳಿಕೆಯನ್ನು ನೀಡುತ್ತಿದ್ದಾರೆ. ದೇಶದ ಸಂವಿಧಾನ ಬದಲಾವಣೆ ಮಾಡುವುದು ಯಾರಿಂದಲೂ ಸಾಧ್ಯವಿಲ್ಲ. ದೇಶದಲ್ಲಿ ಕೋಟ್ಯಾಂತರ ನಾಗರಿಕರ ಬದುಕು ಸಂವಿಧಾನದ ಮೇಲೆ ನಿಂತಿದೆ. ಅದನ್ನು ಬದಲಾವಣೆ ಮಾಡುವ ತಾಕತ್ತು ಯಾರಿಗೂ ಇಲ್ಲ ಎಂದರು.

## ಜಾಬ್‌ಕಾರ್ಡ್ ಇ-ಕೆವೈಸಿ ಕಡ್ಡಾಯ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಉದ್ಯೋಗ ಚೀಟಿ (ಎಂಥ ಅಚಿಡಿಜ)ಗಳಿಗೆ ಎನ್‌ಎಂಎಂಎಸ್ ಆ್ಯಪ್ ಮೂಲಕ ಇ–ಕೆವೈಸಿ ಮಾಡುವುದು ಕಡ್ಡಾಯವಾಗಿದ್ದು, ಸಮರೋಪಾದಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸುವಂತೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಗ್ರಾ.ಪಂ ಸಿಬ್ಬಂದಿಗೆ ಸೂಚಿಸಿದರು.

ಗದಗ ತಾ.ಪಂ ಬುಧವಾರ ಗೂಗಲ್ ಮೀಟ್ ಮೂಲಕ ಆಯೋಜಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕು ವ್ಯಾಪ್ತಿಯಲ್ಲಿ ಒಟ್ಟು 27 ಗ್ರಾಮ ಪಂಚಾಯಿತಿಗಳಿದ್ದು, ಒಟ್ಟು 52,022 ಸಕ್ರಿಯ ಉದ್ಯೋಗ ಚೀಟಿಗಳಿವೆ. ಸದ್ಯ ಸಕ್ರಿಯ ಉದ್ಯೋಗ ಚೀಟಿಗಳಿಗೆ ಇ–ಕೆವೈಸಿ ಮಾಡುವಂತೆ ಆಯುಕ್ತಾಲಯದಿಂದ ಆದೇಶ ಬಂದಿದೆ. ಅದರಂತೆ ತಾಲೂಕಿನ ಎಲ್ಲ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ತಮ್ಮ ಗ್ರಾ.ಪಂ ವ್ಯಾಪ್ತಿಯಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಬೇಕು. ಜೊತೆಗೆ ಇ–ಕೆವೈಸಿ ಕಾರ್ಯಕ್ಕೆ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಿ ಸಕ್ರಿಯವಾಗಿರುವ ಜಾಬ್‌ಕಾರ್ಡ್‌ಗಳಿಗೆ ಇ–ಕೆವೈಸಿ ಮಾಡಿಸುವಂತೆ ಸೂಚಿಸಿದರು.

ತಾ.ಪಂ ಸಹಾಯಕ ನಿರ್ದೇಶಕ (ಉಖಾ) ಕುಮಾರ ಪೂಜಾರ ಮಾತನಾಡಿ, ಗದಗ ಜಿಲ್ಲೆಯಲ್ಲಿಯೇ ಅತಿ ಹೆಚ್ಚು ಗ್ರಾ.ಪಂಗಳು ಗದಗ ತಾಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಬರುತ್ತವೆ. ಜಿಲ್ಲೆಯಲ್ಲಿ ಅತಿ ಹೆಚ್ಚು ಸಕ್ರಿಯ ಉದ್ಯೋಗ ಚೀಟಿಗಳು ಗದಗ ತಾಲೂಕಿನಲ್ಲಿವೆ. ಗ್ರಾಮ ಪಂಚಾಯಿತಿಯ ಗ್ರಾಮ ಕಾಯಕ ಮಿತ್ರರು, ಬಿಎಫ್‌ಟಿ, ಡಿಇಒ ಮತ್ತು ಕಾಯಕ ಬಂಧುಗಳನ್ನು ಸಕ್ರಿಯವಾಗಿ ಇ–ಕೆವೈಸಿ ಕಾರ್ಯದಲ್ಲಿ ತೊಡಗಿಸಿಕೊಂಡು ಪೂರ್ಣಗೊಳಿಸುವಂತೆ ತಿಳಿಸಿದರು.


## ನ್ಯಾಯಾಧೀಶರ ಮೇಲಿನ ಹಲ್ಲೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಗದಗ

ಸುಪ್ರೀಂಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿಯವರಿಗೆ ವಕೀಲನೊಬ್ಬ ಶೂ ಎಸೆದು ಅವಮಾನ ಮಾಡಿರುವ ಘಟನೆಯನ್ನು ದಲಿತ ಯುವ ಸೇನಾ ಸಮಿತಿ ಖಂಡಿಸಿದ್ದು, ನ್ಯಾಯಾಲಯಕ್ಕೆ ಅವಮಾನ ಮಾಡಿದ ವಕೀಲನನ್ನು ಕೂಡಲೇ ಬಂಧಿಸಿ ಕಾನೂನು ಕ್ರಮವನ್ನು ಕೈಗೊಳ್ಳಬೇಕೆಂದು ಆಗ್ರಹಿಸಿದೆ.

ಸಮಿತಿಯ ಗದಗ ಜಿಲ್ಲಾಧ್ಯಕ್ಷ ವಿಜಯ ಎಸ್. ಮುಳಗುಂದ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ, ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಸಮಾಜವನ್ನು ಒಡೆದು ಪರಸ್ಪರ ದ್ವೇಷ ಮತ್ತು ಅಸಹನೆಯನ್ನು ಹುಟ್ಟುಹಾಕಿರುವ ವಿಕೃತ ಮನಸ್ಸುಗಳು ಇವತ್ತು ದೇಶದಲ್ಲಿ ವಿಜೃಂಭಿಸುತ್ತಿವೆ. ಕೆಲವರು ಪುಂಡರ ಜೊತೆ ಸೇರಿ ವಕೀಲನ ದುಷ್ಕೃತ್ಯವನ್ನು ಸಂಭ್ರಮಿಸುವುದನ್ನು ಕಾಣುತ್ತಿದ್ದೇವೆ. ಇಂತವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದು ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ವೆಂಕಟೇಶ ಎಚ್.ಬಳ್ಳಾರಿ, ಮೋಹನ ಭಜಂತ್ರಿ, ಸಣ್ಣವೆಂಕಟೇಶ ಬಿಂಕದಕಟ್ಟಿ, ಸಂಜೀವ ಗಂಗಾವತಿ ಕೊರವರ, ದ್ಯಾಮಣ್ಣ ಬಿಜಾಪೂರ, ಬಸವರಾಜ ಸತ್ಯಮ್ಮನವರ, ಮಲ್ಲಪ್ಪ ಸಣ್ಣಕ್ಕಿ, ಲಕ್ಷ್ಮಣ ಸಣ್ಣಕ್ಕಿ, ವಿನಾಯಕ ಹೊಸಳ್ಳಿ, ನಾಗರಾಜ ಸಾಸ್ವಹಳ್ಳಿ, ತಾನುಜ ದೊಡ್ಡಮನಿ, ಗಂಗಪ್ಪ ಹೆಬ್ಬಳ್ಳಿ, ಲಿಂಗರಾಜ ದೊಡ್ಡಮನಿ, ಕಿರಣ ಮಿಸ್ರಿಕೋಟಿ, ವಿಜಯ ಚಲವಾದಿ, ಅಶೋಕ ತಾಳದ ಮುಂತಾದವರಿದ್ದರು.



## ವಿ.ವಿ ಪಠ್ಯವಾಗಿ ಮಕಾನದಾರರ ಕವಿತೆ

■ವಿಜಯಸಾಕ್ಷಿ ಸುದ್ದಿ, ಗದಗ

ಕವಿ, ಲೇಖಕ, ನ್ಯಾಯಾಂಗ ಇಲಾಖೆಯ ನಿವೃತ್ತ ನೌಕರ, ಪ್ರಕಾಶಕ ಎ.ಎಸ್. ಮಕಾನದಾರ ಅವರ ಕವಿತೆ ರಾಜ್ಯ ಶಿಕ್ಷಣ ನೀತಿಯಡಿ ಸಿದ್ಧಪಡಿಸಿದ ಕನ್ನಡ ವಿಭಾಗದ ಕಲಾ ಪದವಿಯ ಭಾಷಾ ಪಠ್ಯ, ಐಚಿಕ ಪಠ್ಯ ಮತ್ತು ಮುಕ್ತ ಆಯ್ಕೆ ಕನ್ನಡ ಪಠ್ಯಗಳಲ್ಲಿ ಸೇರ್ಪಡೆಯಾಗಿದೆ.

ಬಳ್ಳಾರಿ ಶ್ರೀ ಕೃಷ್ಣ ದೇವರಾಯ ವಿಶ್ವ ವಿದ್ಯಾಲಯದ ಬಿಎಸ್‌ಸಿ /ಬಿಎಸ್‌ಸಿ (ಜಿಎಂಟಿ) ಬಿಸಿಎ 4ನೇ ಸೆಮಿಸ್ಟರ್ ಭಾಷಾ ಕನ್ನಡ ಪಠ್ಯ, ವಿಜ್ಞಾನ ಸೌರಭ–3ರಲ್ಲಿ ಕವಿ ಮಕಾನದಾರ ಅವರ 'ದರ್ವೇಶಿ ಪದ್ಯ' ಕವನ ಸಂಕಲನದ 'ಲಾಂದ್ರದ ಬೆಳಕಲ್ಲಿ ಅವ್ವ' ಎನ್ನುವ ಕವಿತೆ ಸೇರ್ಪಡೆಯಾಗಿದೆ.



ಕಳೆದ ತಿಂಗಳು ಮಹಾರಾಷ್ಟ್ರ ರಾಜ್ಯದ ಕೊಲ್ಲಾಪುರದ ಶಿವಾಜಿ ವಿಶ್ವವಿದ್ಯಾನಿಲಯದ ಸೊಲ್ಲಾಪುರ್ ಪುಣ್ಯಶ್ಲೋಕ ಅಹಲ್ಯಬಾಯಿ ಹೋಳ್ಕರ್ ವಿಶ್ವವಿದ್ಯಾಲಯಗಳ ಬಿ.ಎ 2ನೇ ಸೆಮ್, ಬಿಕಾಂ 3ನೇ ಸೆಮ್, ಬಿವಿಎ (ಬ್ಯಾಚುಲರ್ ಆಫ್ ವಿಜುವಲ್ ಆರ್ಟ್) 3ನೇ ಸೆಮ್‌ಗಳಿಗೆ ಎರಡು ಗಜಲ್‌ಗಳು ಪಠ್ಯವಾಗಿ ಆಯ್ಕೆಯಾಗಿದ್ದನ್ನು ಇಲ್ಲಿ ಸ್ಮರಿಸಬಹುದು.

## ಇಂದು ವಿಶೇಷ ಸಹಕಾರ ತರಬೇತಿ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಕೆ.ಸಿ.ಸಿ. ಬ್ಯಾಂಕ್ ಲಿ., ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯಲ್ಲಿ ಚುನಾವಣೆ ಜರುಗಲಿರುವ ಸಹಕಾರ ಸಂಘಗಳ ರಿಟರ್ನಿಂಗ್ ಅಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ಸಹಕಾರ ತರಬೇತಿ ಶಿಬಿರವನ್ನು ಅಕ್ಟೋಬರ್ 9 ರಂದು ಬೆಳಿಗ್ಗೆ 10 ಘಂಟೆಗೆ ದಿ.ಕೆ.ಸಿ.ಸಿ. ಬ್ಯಾಂಕ್‌ನ ಸಭಾಭವನದಲ್ಲಿ ಜರುಗಲಿದೆ.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷರಾದ ಸಿ. ಎಂ. ಪಾಟೀಲ ವಹಿಸುವರು. ಉದ್ಘಾಟನೆ ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿಂಯರಾದ ಶ್ರೀಮತಿ ಎಸ್. ಎಸ್. ಕಬಾಡೆ ನೆರವೇರಿಸಲಿದ್ದಾರೆ.

ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳ ನಿ., ಬೆಂಗಳೂರು ಇದರ ನಿರ್ದೇಶಕರಾದ ಎಚ್. ಜಿ. ಹಿರೇಗೌಡ್ರ ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಉಪಾಧ್ಯಕ್ಷರಾದ ವಾಯ್. ಎಫ್. ಪಾಟೀಲ, ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ನಿರ್ದೇಶಕರಾದ ಎಂ. ಎಫ್. ಕಲಗುಡಿ, ಸಿ. ಬಿ. ದೊಡ್ಡಗೌಡ್ರ, ಗದಗ ಜಿಲ್ಲಾ ▶▶3ನೇ ಪುಟಕ್ಕೆ

## ಮನೋರಮಾ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಸ್ವಾಗತ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಕಾಲೇಜಿನಲ್ಲಿ ಬಿಸಿಎ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭವನ್ನು ಮಹಾವಿದ್ಯಾಲಯದ ಹಿರಿಯ ವಿದ್ಯಾರ್ಥಿಗಳು ಆಯೋಜಿಸಿದ್ದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾಗಿರುವ ವಾತಾವರಣ ಹಾಗೂ ಉತ್ತಮ ಕಲಿಕಾ ಗುಣಮಟ್ಟ ನಮ್ಮ ಕಾಲೇಜಿನಲ್ಲಿದ್ದು, ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಿ ಎಂದರು.

ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ ಮಾತನಾಡಿ, ಶಿಸ್ತು-ಸಂಯಮದಿಂದ ವರ್ತಿಸಿ ನಿಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಿ. ನಿಮ್ಮ ಅರಿವೇ ನಿಮಗೆ ದಾರಿದೀಪವಾಗಲಿ. ಕಾಲೇಜಿನ ನಿಯಮಾವಳಿಗಳನ್ನು ಪಾಲಿಸಿ ಎಂದರು.

ಸಭೆಯ ಅದ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ ವಹಿಸಿದ್ದರು. ಈ ಸಂಧರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಸಂಸ್ಥೆಯ ನಿರ್ದೇಶಕರುಗಳಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಸವಿತಾ ಪೂಜಾರ, ಪಿಯುಸಿ ಸಂಯೋಜಕರಾದ ಪ್ರೊ. ಶಾಹೀದಾ ಶಿರಹಟ್ಟಿ, ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಈರುಳ್ಳಿ ಖರೀದಿ ಕೇಂದ್ರ ಪ್ರಾರಂಭಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಈರುಳ್ಳಿ ಬೆಳೆಗೆ ಬೆಂಬಲ ಬೆಲೆ ನಿಗದಿ ಮಾಡಿ ಮಾರುಕಟ್ಟೆಯಲ್ಲಿ ಖರೀದಿ ಕೇಂದ್ರ ಪ್ರಾರಂಭಿಸುವಂತೆ ಗದಗ ಜಿಲ್ಲಾ ರೈತಪರ ಹೋರಾಟ ವೇದಿಕೆಯ ಸಂಚಾಲಕ ವೆಂಕಟೇಶ ಕುಲಕರ್ಣಿ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ವೆಂಕಟೇಶ ಕುಲಕರ್ಣಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ಬಹುತೇಕ ತಾಲೂಕುಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ಈರುಳ್ಳಿಯನ್ನು ಬೆಳೆದಿದ್ದು, ಈಗ ಮಾರುಕಟ್ಟೆಯಲ್ಲಿ ಸರಿಯಾದ ದರ ಇಲ್ಲದೆ ತೀವ್ರ ಹಾನಿಯನ್ನು ಅನುಭವಿಸುತ್ತಿದ್ದೇವೆ. ಅತಿವೃಷ್ಟಿ, ರೋಗ ಬಾಧೆಗಳಿಂದ ನಿರೀಕ್ಷಿತ ಇಳುವರಿ ಬಂದಿಲ್ಲ. ಗೊಬ್ಬರ, ಬೀಜ, ಕ್ರಿಮಿನಾಶಕ, ಕಾರ್ಮಿಕರ ವೆಚ್ಚ ಹೆಚ್ಚಾಗಿರುವುದರಿಂದ ನಷ್ಟ ಅನುಭವಿಸುವ ಸಂಕಷ್ಟ ಪರಿಸ್ಥಿತಿಯಲ್ಲಿ ರೈತರು ನಲುಗುತ್ತಿದ್ದಾರೆ.

ಕೂಡಲೇ ರಾಜ್ಯ ಸರ್ಕಾರ ರೈತರ ಹಿತದೃಷ್ಟಿಯಿಂದ ರೈತರು ಬೆಳೆದ ಈರುಳ್ಳಿಗೆ ಬೆಂಬಲ ಬೆಲೆಯನ್ನು ನಿಗದಿ ಮಾಡಿ ಶೀಘ್ರವಾಗಿ ಖರೀದಿ ಕೇಂದ್ರವನ್ನು ಪ್ರಾರಂಭ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಅತಿವೃಷ್ಟಿಯಿಂದ ಬೆಳೆಹಾನಿ ಅನುಭವಿಸಿದ ರೈತರಿಗೆ ಕೂಡಲೇ ಪರಿಹಾರ ನೀಡಬೇಕು. ಕೂಡಲೇ ಮೆಕ್ಕೆಜೋಳ, ಹೆಸರು ಶೇಂಗಾ ಮುಂತಾದ ರೈತ ಬೆಳೆಗಳನ್ನು ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲು ಖರೀದಿ ಕೇಂದ್ರ ಪ್ರಾರಂಭಿಸಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಸಂಘಟನೆಗಳ ಮುಖಂಡರಾದ ಶಂಕರಗೌಡ ಜಯನಗೌಡರ, ಎನ್. ಎಮ್. ಸಿದ್ದೇಶ, ವೀರಣ್ಣ ಕಾಳಗಿ, ಬಸವರಾಜ, ಆದಪ್ಪ, ತಿಪ್ಪಣ್ಣ, ಸಿದ್ದಪ್ಪ ವಡ್ಡಟ್ಟಿ, ಮಲ್ಲಪ್ಪ ಮಠದ, ಬಸವರಾಜ ಪಲ್ಲೇದ, ಯಲ್ಲಪ್ಪ ಶಲವಡಿ, ಸಿದ್ದಪ್ಪ ಜಂಬಾಳಿ, ವಿಜಯ ಕೋಳೇಕಾರ, ಹುಚ್ಚೀರಪ್ಪ ಹೊಂಬಳ, ಪರಶುರಾಮಪ್ಪ ಹೊಂಬಳ, ನಾಗಪ್ಪ ಚಿಕರಡ್ಡಿ, ಬಸವರಾಜ ಕೋತಂಬ್ರಿ, ಶಂಭು ಪರದಿಗೌಡ್ರ, ಸೋಮಣ್ಣ ಆನಿ, ಈರಣ್ಣ ನಂದಿಗೋಡ, ಸೋಮನಗೌಡ ಕರಿಗೌಡ್ರ, ಲೋಹಿತಪ್ಪ ತಲಗೋಡಿ, ರಾಮನಗೌಡ ಮುಂತಾದವರಿದ್ದರು.

ಲಿಂ. ಶ್ರೀಮದ್ ರಂಭಾಪುರೀ ಜಗದ್ಗುರು ವೀರಗಂಗಾಧರ ಶಿವಾಚಾರ್ಯರ ಭಗವತ್ಪಾದರ 43ನೇ ಪುಣ್ಯಾರಾಧನಾ ಮಹೋತ್ಸವದ ನಿಮಿತ್ತ ಲೇಖನ

# ಶಿವನ ಅವತಾರಿಯಂತಿದ್ದ ಶ್ರೀಗಳು

ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶ ಕೊಟ್ಟ ರಂಭಾಪುರಿ ಪೀಠದ ಯುಗಪುರುಷ ಲಿಂ. ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ವೀರಗಂಗಾಧರ ಭಗತ್ಪಾದಗಳವರ 43ನೇ ಪುಣ್ಯಾರಾಧನೆ ಅ.9ರಂದು ಜರುಗಲಿದೆ. ಚಿಕ್ಕಂದಿನಿಂದಲೇ ಆಧ್ಯಾತ್ಮದ ಕಡೆಗೆ ಒಲವು. ಪ್ರಾಥಮಿಕ ಶಿಕ್ಷಣವನ್ನು ಅಲ್ಲಿಯೇ ಪೂರೈಸಿ ಹೆಚ್ಚಿನ ಅಭ್ಯಾಸಕ್ಕೆ ಸೋಲ್ಲಾಪೂರಕ್ಕೆ ದಯಮಾಡಿಸಿದರು. ಅಲ್ಲಿ ವೇದಾಗಮ ತರ್ಕಶಾಸ್ತ, ನ್ಯಾಯಶಾಸ್ತ್ರ ಅಭ್ಯಾಸಗೈಯುತ್ತಿರುವಾಗಲೇ ಇವರ ವಿಶಿಷ್ಟ ವ್ಯಕ್ತಿತ್ವ ಕಂಡು ಬೆಂಗಳೂರು ಮಹಾಂತರಮಠದ ಪಟ್ಟಾಧ್ಯಕ್ಷರಾಗಿ ಆಯ್ಕೆಯಾಗಿದ್ದು ನಾಡಿನ ಭಾಗ್ಯ.

ಅಂದಿನ ರಂಭಾಪುರಿ ಪೀಠದ 118ನೇ ಶ್ರೀ ಜಗದ್ಗುರು ಶಿವಾನಂದ ರಾಜೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳವರತ ಸಾನ್ನಿಧ್ಯದಲ್ಲಿ ಅವಿರತ ಸೇವೆಗೈದು ಅವರ ಹೃದಯ ಗೆದ್ದು ಶ್ರೀ ಗಂಗಾಧರ ಶಿವಾಚಾರ್ಯರರು 15/05/1947ರಂದು ವೀರಸಿಂಹಾಸನದ ಮೇಲೆ ಕುಳ್ಳಿರಿಸಿ ಸುವರ್ಣ ಕಿರಿಟವನ್ನು ಧರಿಸಿ ರಂಭಾಪುರಿ ಪೀಠದ 198ನೇ ಪೀಠಾಧ್ಯಕ್ಷರಾಗಿ ಶ್ರೀ ಜಗದ್ಗುರು ಪ್ರಸನ್ನ ರೇಣುಕವೀರಗಂಗಾಧರ ರಾಜದೇಶಿಕೇಂದ್ರ ಶಿವಾಚಾರ್ಯ ಭಗತ್ಪಾದರೆಂದು ನೂತನ ಅಭಿದಾನವನ್ನು ಹೊಂದಿದದರು.

ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಭಗತ್ಪಾದರು ಶಿವ ಅವತಾರಿಯಂತಿದ್ದರು. ಅವರ ನಡೆ ನುಡಿಗಳಲ್ಲಿ ಸಿಂಹಗರ್ಜನೆ ತುಂಬಕೊಂಡಿತ್ತು. ಪಂಚಪೀಠದ ಪರಂಪರರೆಯಲ್ಲಿ ಅತ್ಯಂತ




ವಿಲಕ್ಷಣವಾದ ಸಾಧನೆಯನ್ನು ಮಾಡುವ ಮೂಲಕ ನೇರವಾಗಿ ಜನಮನವನ್ನು ತಲುಪಿದ ಕೀರ್ತಿ ಅವರದು. ಶಿವಪೂಜೆಯ ಪರ್ಯಾಯ ನಾಮದಂತಿದ್ದ ಪರಮಪೂಜ್ಯರು ಶಿವಪೂಜೆಗೆ ಕುಳಿತುಕೊಂಡರೆ ಇಹಲೋಕವನ್ನೇ ಮರೆಯುತ್ತಿದ್ದರು. ಅವರು ಶಿವಪೂಜೆಗೆ ಕುಳಿತರೆ ಕೈಲಾಸವೇ ಕುತೂಹಲದಿಂದ ಕೆಳಗಿಳಿದು ಅವರನ್ನು ನೋಡಲು ಬರುತ್ತಿದೆ ಎಂದು ಭಾಸವಾಗುತ್ತಿತ್ತು. ಅಷ್ಟೊಂದು ವೈಭವದ ಮತ್ತು ಅಲಂಕಾರ ಪೂಜೆಯನ್ನು ಮಾಡುವವರು ಅಪರೂಪ. ಪೂಜಾವಿಧಾನದಲ್ಲಿ ಅವರದು ದಾಖಲಾತ್ಮಕ ಸಾಧನೆ. ಪೂರ್ಣಕುಂಭಗಳನ್ನು ಖುದ್ದಾಗಿ ಹೊತ್ತು ತರುತ್ತಿದ್ದ ಆ ವೈಭವವನ್ನು ನೋಡಿ ಸಂತೋಷಪಟ್ಟ ಜನ ಈಗಲೂ ಇದ್ದಾರೆ.

ಬದುಕಿನ ಎಲ್ಲ ಮುಖಗಳೊಂದಿಗೆ ತಮ್ಮನ್ನು ಗುರುತಿಸಿಕೊಳ್ಳಲು ಇಷ್ಟಪಡುತ್ತಿದ್ದ ಪರಮ ಪೂಜ್ಯರು ಒಮ್ಮೆ ರಾಜವೇಷಗಳನ್ನು ಧರಿಸಿಕೊಂಡರೆ ಇನ್ನೊಮ್ಮೆ ಗೋಣಿಚೀಲವನ್ನು ಸುತ್ತಿಕೊಂಡು ನಿಲ್ಲುತ್ತಿದ್ದರು. ತಮ್ಮ ಸಲಕ್ಷಣ ವ್ಯಕ್ತಿತ್ವವನ್ನು ವಿಲಕ್ಷಣ ವರ್ಚಸ್ಸಿನಿಂದ ತುಂಬಿ ನಾಡಿನ ಮೂಲೆ ಮೂಲೆಯಲ್ಲಿ ಜನರ ಅಭಿಮಾನ ಭಾಜನರಾಗಿದ್ದರು. ಪೂಜ್ಯರ ಹೆಸರು ಕೇಳಿದರೆ ಸಾಕು ಜನರ ಮೈಮನಗಳು ರೋಮಾಂಚನಗೊಳ್ಳುತ್ತಿತ್ತು. ಸದೃಢಕಾಯರಾದ ಪಮರಪೂಜ್ಯರದು ಸಿಂಹಮಣಿ, ಅವರ ತಪಃಶಕ್ತಿಯಲ್ಲಿ ಮತ್ತು ಸಂಕಲ್ಪಶಕ್ತಿಯಲ್ಲಿ ಸಿಂಹಬಲವಿತ್ತು. ತಮ್ಮ ತಪೋಬಲದಿಂದ ಪಂಚಭೂತಗಳನ್ನೇ ಅಲುಗಾಡಿಸಿದ ಖ್ಯಾತಿ ಅವರದು. ಅವರ ಕಣ್ಣುಗಳಲ್ಲಿ ಮಿಂಚಿನ ಬಳ್ಳಿಗಳಿದ್ದವು.

ಯಡೆಯೂರ ಕ್ಷೇತ್ರದಲ್ಲಿ 1947ರಲ್ಲಿ ಅವರ ಪ್ರಥಮ ದಸರಾ ದರ್ಬಾರ್ ನಡೆದಾಗ ಅಂದಿನ ಮೈಸೂರು ಮಹಾರಾಜರು ಹಾಗೂ ಪರಿವಾದವರು ಬಂದು ದರ್ಶನಾಶೀರ್ವಾದ ಪಡೆದರು. ಅರಮನೆಯ ಗೌರವ ಗುರುಕಾಣಿಕೆ ಸಲ್ಲಿಸಿದರು. 1958ರಲ್ಲಿ ತುಮಕೂರು ಮಹಾನಗರದಲ್ಲಿ ನಡೆದ ಜಗದ್ಗುರುಗಳವರ ಪೂಜಾನುಷ್ಠಾನದಲ್ಲಿ ಅಂದಿನ ಮೈಸೂರು ಅರಸರಾದ ಶ್ರೀ ಯಜಚಾಮರಾಜ ಒಡೆಯರು ದರ್ಶನಾಶೀರ್ವಾದ ಪಡೆದು, ಧರ್ಮದ ವಿಚಾರಗಳನ್ನು ಹಂಚಿಕೊಂಡರು.

ಅಂದು ಜಗದ್ಗುರುಗಳು ಕೊಟ್ಟ ಸಂದೇಶ ಇಂದಿಗೂ ಪ್ರಸ್ತುತ. ಕೇದಾರ ಪೀಠದ ಪಟ್ಟಾಭಿಷ್ಠಕಕ್ಕೆ (1966) ದಯಮಾಡಿಸುವಾಗ ಮಾರ್ಗ ಮಧ್ಯದ ರಾಜಧಾನಿ ದಿಲ್ಲಿಯಲ್ಲಿ ಇಂದಿನ ರಾಷ್ಟ್ರಪತಿ ಹಾಗೂ ತತ್ವಜ್ಞಾನಿ ಡಾ. ಎಸ್. ರಾಧಾಕೃಷ್ಣನ್‌ನ್ನರು ಶ್ರೀಗಳನ್ನು ತಮ್ಮ ಭವನಕ್ಕೆ ಆಮಂತ್ರಿಸಿ ಪೂಜ್ಯ ಜಗದ್ಗುರುಗಳಿಂದ ತೀರ್ಥ-ಪ್ರಸಾದವನ್ನು ಸ್ವೀಕರಿಸಿದರು. ಅವರ ಜೊತೆ ಸಂಸ್ಕೃತದಲ್ಲಿ ಮಾತನಾಡಿದ್ದು ರಾಷ್ಟ್ರಪತಿಯವರಿಗೆ ಅತೀವ ಸಂತೋಷ ತಂದಿತು. 1971ರಲ್ಲಿ ಬೆಂಗಳೂರಿನಲ್ಲಿ ನಡೆದ ಧನುರ್ಮಾಸ ಪೂಜಾ ಸಮಾರಂಭದಲ್ಲಿ ಅಂದಿನ ರಾಜ್ಯದ ಮುಖ್ಯಮಂತ್ರಿ ಶ್ರೀ ವೀರೇಂದ್ರ ಪಾಟೀಲರು ಪೂಜೆಯಲ್ಲಿ ಭಾಗವಹಿಸಿ ಆಶೀರ್ವಾದ ಪಡೆದರು. 1978ರಲ್ಲಿ ಪೂಜ್ಯ ಜಗದ್ಗುರುಗಳ ದಸರಾ ದರ್ಬಾರ್ ಹಾಗೂ ಶರನ್ನವರಾತ್ರಿ ಸಮಾರಂಭ ಮೈಸೂರು ನಗರದ ಜಗನ್ಮೋಹನ ಅರಮನೆಯಲ್ಲಿ ನಡೆದಿತ್ತು. ಅಂದಿನ ಉಪರಾಷ್ಟ್ರಪತಿಗಳು ಹಾಗೂ ಪ್ರಬಾರಿ ರಾಷ್ಟ್ರಪತಿಗಳ ಸ್ಥಾನದಲ್ಲಿದ ಬಿ.ಡಿ. ಜತ್ತಿಯವರು ಮುಂಜಾನೆ ಸರ್ಕಾರಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಾಯಂಕಾಲದ ದಸರಾ ದರ್ಬಾರ್‌ದಲ್ಲಿ ಪಾಲ್ಗೊಂಡು ಜಗದ್ಗುರುಗಳವರ ದರ್ಶನಾಶೀರ್ವಾದ ಪಡೆದುಕೊಂಡದ್ದಲ್ಲದೇ ತಮ್ಮ ಭಾಷಣದಲ್ಲಿ ರಂಭಾಪುರೀ ಪೀಠ ಜಗದ್ಗುರುಗಳ ದರ್ಶನಕ್ಕಾಗಿ ಬಂದಿದ್ದೇನೆ ಎಂದು ಹೇಳಿದಾಗ ಅಲ್ಲಿದ ಜನರೆಲ್ಲ ಮೂಕವಿಸ್ಮಿತರಾದರು. ಇವೆಲ್ಲವೂ ಅವರ ತಪಸ್ಸಿನ ಶಕ್ತಿ ಪ್ರಭಾವವೇ ಸರಿ.

ಪರಮ ಪೂಜ್ಯ ವೀರಗಂಗಾಧರ ಜಗದ್ಗುರುಗಳು ಉಳಿದೆಲ್ಲ ಸಮಾನ ಪೀಠಗಳ ಪೀಠಾಚಾರ್ಯರರನ್ನು ಆತ್ಮೀಯವಾಗಿ ಗೌರವಿಸುತ್ತಿದ್ದರು. ಅದರಂತೆ ಅವರೂ ಕೂಡಾ ಗೌರವಾದಗಳಿಗೆ ಪ್ರೀತಿ ವಿಶ್ವಾಸದಿಂದ ನಡೆದು ಕೊಳ್ಳುತ್ತಿದ್ದರು. ಪರಮಪೂಜ್ಯ ಜಗದ್ಗುರುಗಳವರ ಜನಮನದಲ್ಲಿ ಪೀಠಾಭಿಮಾನವನ್ನು ಬೆಳೆಸಿ ಆ ಅಭಿಮಾನವನ್ನೇ ಶ್ರೀ ಪೀಠದ ಆಸ್ತಿಯನ್ನಾಗಿಸಿದರು. ವೈರಾಗ್ಯ ಮತ್ತು ವೈಭವ ಇವೆರಡೂ ಅವರಲ್ಲಿ ಸಮ್ಮಿತಗೊಂಡಿದ್ದವು. ಕಾಠಿಣ್ಯತೆ ಮತ್ತು ಕೋಮಲತೆ ಅವರಲ್ಲಿ ಕೂಡಿಕೊಂಡಿತ್ತು.

ರಂಭಾಪುರೀ ಶ್ರೀ ಪೀಠಕ್ಕೆ ವೀರಪೀಠವೆಂಬ ಹೆಸರು ಅವರಿಂದಾಗಿ ಅನ್ವರ್ಥಕಗೊಂಡಿಂತೆ ಭಾಸವಾಗುತ್ತಿತ್ತು. ಶ್ರೀ ಪೀಠದ ಇತಿಹಾಸವನ್ನು ಜನರು ಕಣ್ತೆರೆದು ನೋಡುವಂತೆ ಮಾಡಿದ ಪರಮಪೂಜ್ಯರು ಜನತಾ ಜನಾರ್ಧನನ್ನು ಹೃದಯದ ಮಧ್ಯದಲ್ಲಿ ತುಂಬಿಕೊಂಡಿದ್ದೂ ಅಚ್ಚಳಿಯದೆ ಹಾಗೆಯೇ ಉಳಿದಿದೆ.

ಈ ವರ್ಷ ಅಕ್ಟೋಬರ್ 10ರಂದು ಲಿಂ ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ 43ನೇ ಪುಣ್ಯಸ್ಮರಣೋತ್ಸವವನ್ನು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ಷ. ಬ್ರ. ವಿಮಲರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ನಿರ್ಧರಿಸಿದ್ದು, ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಶ್ರೀ ರಂಭಾಪುರಿ ಡಾ. ಶ್ರೀ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗತ್ಪಾದವರ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿದೆ. ಸಮಾರಂಭದ ನೇತೃತ್ವವನ್ನು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ಷ.ಪ್ರ ವಿಮಲರೇಣುಕ ವೀರ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ವಹಿಸಿಕೊಳ್ಳಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ಮ.ನಿ.ಪ್ರ ಡಾ: ಕರಿವೃಷಭ ದೇಶಿಕೇಂದ್ರ ಶಿವಯೋಗೇಶ್ವರ ಸ್ವಾಮಿಗಳು ಶ್ರೀ ಕಾಡಸಿದ್ದೇಶ್ವರಮಠ ನೊಣವಿನಕೆರೆ ವಹಿಸುವರು.


**– ವೀರೇಶ ಎಸ್. ಕೂಗು.**
ವಕೀಲರು, ತೆರಿಗೆ ಸಲಹೆಗಾರರು–ಗದಗ.

# ಧರ್ಮ ದುಂದುಭಿ ಲಿಂ. ಶ್ರೀ ವೀರಗಂಗಾಧರ ಜಗದ್ಗುರುಗಳು

ಭಾರತಾಂಬೆಯ ಪ್ರಕೃತಿ ಮಡಿಲಿನಲ್ಲಿ ಅನೇಕ ಪವಾಡಗಳು, ವಿಸ್ಮಯಗಳು ಕಾಲಕಾಲಕ್ಕೆ ಗೋಚರಿಸುತ್ತಾ ಬಂದಿವೆ. ಹಲವಾರು ಪುಣ್ಯ ಕ್ಷೇತ್ರಗಳಲ್ಲಿ ಸಂತರು, ಅಘೋರಿಗಳು, ತಪಸ್ವಿಗಳು ಲೋಕಕಲ್ಯಾಣಾರ್ಥವಾಗಿ ಪೂಜಾ ಕೈಂಕರ್ಯಗಳು, ತಪೋನುಷ್ಠಾನಗಳನ್ನು ನಡೆಸಿಕೊಂಡು ಬಂದಿದ್ದು ನಮ್ಮ ಸನಾತನ ಹಿಂದೂ ಧರ್ಮದ ಒಂದು ವೈಶಿಷ್ಟ್ಯವಾಗಿದೆ. ಈ ದೇಶದಲ್ಲಿ ವೀರಶೈವ ಧರ್ಮವು ತನ್ನದೇ ಆದ ವಿಶಿಷ್ಠ ವಿಚಾರ ಧಾರೆ ಹಾಗೂ ಸಂಸ್ಕೃತಿ-ಸಂಸ್ಕಾರವನ್ನು ನೀಡಿ ವಿಶ್ವಮಟ್ಟದಲ್ಲಿ ಗಮನ ಸೆಳೆದಿದೆ.

ವೀರಶೈವ ಧರ್ಮದ ಮೂಲ ಸ್ಥಾಪಕರಾದ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ಜಗತ್ತಿನ ಕಲ್ಯಾಣಕ್ಕಾಗಿ ಪರಶಿವನ ಪಂಚಮುಖಗಳಿಂದ ಆವಿರ್ಭವಿಸಿದವರು. ಶ್ರೀ ರಂಭಾಪುರಿ ಶ್ರೀ ಉಜ್ಜೈನಿ, ಶ್ರೀ ಕೇದಾರ, ಶ್ರೀ ಶ್ರೀಶೈಲ, ಶ್ರೀ ಕಾಶಿ ಪೀಠಗಳು ಶಿವಾದ್ವೈತ ಸಿದ್ಧಾಂತದ ಕೇಂದ್ರಗಳು. ಧರ್ಮ ರಕ್ಷಣೆಗಾಗಿ ಭಕ್ತ ಸಂಕುಲಕ್ಕೆ ಶಿವಜ್ಞಾನದ ಬೆಳಕು, ಆಚಾರ-ವಿಚಾರಗಳನ್ನು ಬೆಳೆಸುವ ಮಹಾತ್ಕಾರ್ಯ ಮಾಡುತ್ತಾ ಬಂದಿವೆ.

ನಾನೀಗ ಹೇಳಲು ಹೊರಟಿರುವುದು ವೀರಶೈವ ಧರ್ಮದ ಅಭಿನವ ಪರಮೇಶ್ವರರು, ಯುಗಪುರುಷರು,



ಧರ್ಮ ದುಂದುಭಿ ವೀರವಿರಾಗಿ ಲಿಂ. ಶ್ರೀಮದ್ರಂಭಾಪುರಿ

ವೀರಸಿಂಹಾಸನಾಧೀಶ್ವರ ಶ್ರೀಶ್ರೀಶ್ರೀ 1008 ಜಗದ್ಗುರು ಪ್ರಸನ್ನ ರೇಣುಕ ವೀರಗಂಗಾಧರ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಭಗವತ್ಪಾದ ಮಹಾಸನ್ನಿಧಿಯವರ ಕುರಿತು. ವಿಶ್ವಶಾಂತಿಗಾಗಿ, ನಾಡು-ನುಡಿ, ಸಂಸ್ಕೃತಿಗಾಗಿ ಹೋರಾಡಿದ ಪರಮ ವೈರಾಗಿಗಳು. ಬಾಲ್ಯದಲ್ಲಿಯೇ ವೀರಶೈವ ಧರ್ಮ, ಇಷ್ಟಲಿಂಗ ಮಹಾಪೂಜೆ, ಗುರುಪರಂಪರೆ, ಸಿದ್ಧಾಂತ ಶಿಖಾಮಣಿ ಗ್ರಂಥದ ಬಗ್ಗೆ ಅಪಾರ ಶ್ರದ್ಧಾ-ಭಕ್ತಿಯನ್ನು ಹೊಂದಿದವರಾಗಿದ್ದರು. ಕಾಲಾಂತರದಲ್ಲಿ ಶ್ರೀಗಳು ತಮ್ಮ ವಿದ್ಯಾಭ್ಯಾಸ ಹಾಗೂ ವೈದಿಕ ಸಂಸ್ಕಾರವನ್ನು ಮುಗಿಸಿಕೊಂಡು ಪಾಲಿಕೊಪ್ಪ ಹಿರೇಮಠದ ಪಟ್ಟಾಧಿಕಾರಕ್ಕೆ 1926ರಲ್ಲಿ ಭಾಜನರಾಗಿದ್ದರು.

ಹಾಗೆಯೆ 1931ರಲ್ಲಿ ಬೆಂಗಳೂರಿನ ವಿಭೂತಿಪುರ ಮಠದ ಅಧಿಕಾರವನ್ನು ವಹಿಸಿಕೊಂಡಿದ್ದರು. ಕಾಲಕ್ರಮೇಣ ಕುಂದಗೋಳ ತಾಲೂಕು ಹರಲಾಪೂರ ಗ್ರಾಮದವರ ಆಶಯದಂತೆ ಒಂದು ತಿಂಗಳ ಕಾಲ ಶ್ರೀಗಳು ಶಿವಲಿಂಗಪೂಜಾ ಅನುಷ್ಠಾನವನ್ನು ಕೈಗೊಂಡಿದ್ದರು. ನಂತರ ಧರ್ಮ ಪ್ರಚಾರಗೈಯುತ್ತ ಲಕ್ಷ್ಮೇಶ್ವರ ಬಳಿಯ ಮುಕ್ತಿಮಂದಿರ ಕ್ಷೇತ್ರಕ್ಕೆ ಬಂದು ಘೋರ ತಪಸ್ಸನ್ನು ಆಚರಿಸಿದರು. ಶ್ರೀಗಳ ತಪಸ್ಸಿನ ಫಲದಿಂದ ಭಕ್ತರು ಕಾಣಿಕೆಯಾಗಿ ಅಲ್ಲಿದ್ದ ಭೂಮಿಯನ್ನು ಮಠದ ಸ್ಥಾಪನೆಗೆ ದಾನವನ್ನಾಗಿ ನೀಡಿದರು. ಸಮಯ ಕಳೆದಂತೆ ಭಕ್ತರ ಸಹಾಯದಿಂದ ಮುಕ್ತಿಮಂದಿರವನ್ನು ಧರ್ಮಕ್ಷೇತ್ರವನ್ನು ಮಾಡಿ ಬಂದ ಭಕ್ತರಿಗೆ ಧರ್ಮಮಾರ್ಗವನ್ನು ಬೋಧಿಸುತ್ತಿದ್ದರು. ಮುಕ್ತಿಮಂದಿರದಲ್ಲಿ ಶ್ರೀ ರೇಣುಕಾಚಾರ್ಯರ, ಶಂಕರಚಾರ್ಯರ, ಮಧ್ವಾಚಾರ್ಯರ, ರಾಮಾನುಜಾಚಾರ್ಯರ, ಬುದ್ಧ, ಮಹಾವೀರ, ನಾನಕ, ಯೇಸುಕ್ರಿಸ್ತ, ಪೈಗಂಬರ ಹೀಗೆ ಸರ್ವ ಧರ್ಮದವರ ಮೂರ್ತಿಯನ್ನು ಕೆತ್ತಿಸಿ ಸ್ಥಾಪಿಸಿ 'ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ಸಂದೇಶವನ್ನು ಜಗತ್ತಿಗೆ ಸಾರಿದ ಧರ್ಮ ದುಂಧುಭಿಯಾಗಿದ್ದಾರೆ.

ಶ್ರೀ ಜಗದ್ಗುರು ರಂಭಾಪುರಿ ಪೀಠದ ಜಗದ್ಗುರು ಶಿವಾನಂದ ಶಿವಾಚಾರ್ಯರ ಆಶಯದಂತೆ ಪಂಚಪೀಠದ ಶ್ರೀಮದ್ರಂಭಾಪುರಿ ಮಹಾಪೀಠಕ್ಕೆ 119ನೇ ಪೀಠಾಧಿಪತಿಯಾಗಿ ಆಯ್ಕೆಯಾದರು. ಪಟ್ಟಾಧಿಕಾರದ ನಂತರ ಅನೇಕ ಧಾರ್ಮಿಕ ಸಾಮಾಜಿಕ ಹಾಗೂ ಲೋಕಕಲ್ಯಾಣಾರ್ಥವಾಗಿ ಜಗತ್ತಿನ ಉದ್ದಗಲಕ್ಕೂ ಅವಿರತವಾಗಿ ಸಂಚರಿಸಿ ವೀರಶೈವ ಧರ್ಮ, ಗುರು, ಲಿಂಗ, ಜಂಗಮ, ಪಾದೋದಕ, ಪ್ರಸಾದ ಇದೆಲ್ಲದರ ಬಗ್ಗೆ ಜಾಗೃತಿ ಮೂಡಿಸುತ್ತ ಭಕ್ತರಿಗೆ ಆರ್ಶಿವಾದವನ್ನು ದಯಪಾಲಿಸುತ್ತಿದ್ದರು.

ಆಷಾಢ ಮಾಸವನ್ನು ಕೆಲವರು ನಿಷೇಧವೆಂದು ಬಿಂಬಿಸಿದ್ದರು ಕೂಡ ಶ್ರೀಗಳವರು ಅಷಾಢ ಮಾಸದಲ್ಲೇ ಹರಿಹರ, ದಾವಣಗೆರೆ, ಬೆಂಗಳೂರು ಸೇರಿ ಹಲವು ಮಹಾನಗರಗಳಲ್ಲಿ ಇಷ್ಟಲಿಂಗ ಮಹಾಪೂಜೆ, ಧರ್ಮಜಾಗೃತಿ ಸಮಾರಂಭವನ್ನು ಕೈಗೊಂಡು ಆಷಾಢವನ್ನು ಶುಭಮಾಸವೆಂದು ತೋರಿದವರಾಗಿದ್ದಾರೆ. ಮೈಸೂರಿನ ರಾಜಮನೆತನ ದಸರಾ ಒಂದು ಕಡೆಯಾದರೆ, ರಂಭಾಪುರಿ ಪೀಠದ ಗುರುಮನೆ ದಸರಾ ಮತ್ತೊಂದು ವೈಭವದ ಸಂಕೇತ. ಈ ದಸರಾ ಮೂಲಕ ಪಂಚಪೀಠಗಳಲ್ಲಿ ವೈರಾಗ್ಯವೂ ಇದೆ. ವೈಭವವೂ ಇದೆ ಎಂಬ ದಿವ್ಯ ಸಂದೇಶವನ್ನು ಜಗತ್ತಿಗೆ ಸಾರಿದರು.

ಶ್ರೀ ಜಗದ್ಗುರು ಮಹಾ ಸನ್ನಿಧಿಯವರು ಲಿಂಗೈಕ್ಯರಾಗಿ 43 ವರ್ಷಗಳು ಕಳೆದಿವೆ. ಇವರ ಪುಣ್ಯಾರಾಧನೆಯನ್ನು ಕರ್ನಾಟಕದಲ್ಲಿ ಹಲವಾರು ಕ್ಷೇತ್ರಗಳಲ್ಲಿ ಆಚರಿಸುತ್ತಾ ಬಂದಿರುವುದು ವೀರಶೈವರ ಪುಣ್ಯದ ಫಲವಾಗಿದೆ. ಶ್ರೀ ಜಗದ್ಗುರುಗಳ ಪುಣ್ಯಾರಾಧನೆಯನ್ನು ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಅ.9ರಂದು ಮುಂಜಾನೆ ಶ್ರೀ ಜಗದ್ಗುರುಗಳವರ ಗದ್ದುಗೆಗೆ ರುದ್ರಾಭಿಷೇಕ, ಬಿಲ್ವಾರ್ಚನೆ, ಮಹಾಮಂಗಳಾರತಿ, ಮಧ್ಯಾಹ್ನ ಮಹಾ ಅನ್ನದಾಸೋಹ, ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಧರ್ಮಜಾಗೃತಿ ಸಮಾರಂಭವನ್ನು ಪ್ರಸ್ತುತ ಶ್ರೀರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ ಸಾನ್ನಿಧ್ಯದಲ್ಲಿ ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರ ಅಪೇಕ್ಷೆಯಂತೆ ನಡೆಯುತ್ತಿದ್ದು, ಸರ್ವರೂ ಆಗಮಿಸಿ ಜಗದ್ಗುರುಗಳ ಕೃಪೆಗೆ ಪಾತ್ರರಾಗಿ.



**– ವಿನಾಯಕ ತೆಲಿಗಿಮಠ.**
ಹರಿಹರ.

## ಇ-ಕೆವೈಸಿಗಾಗಿ ಮನೆಗಳಿಗೆ ಭೇಟಿ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿ ಕೆಲಸ ಮಾಡುತ್ತಿರುವ ಕೂಲಿಕಾರರಿಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯವು ಇ-ಕೆವೈಸಿ ಕಡ್ಡಾಯಗೊಳಿಸಿರುವ ಹಿನ್ನೆಲೆಯಲ್ಲಿ ತಾ.ಪಂ ಇಓ ವಿಶ್ವನಾಥ ಹೊಸಮನಿ ಕೊರ್ಲಹಳ್ಳಿ ಗ್ರಾ.ಪಂ ವ್ಯಾಪ್ತಿಯ ಬೆಣ್ಣಿಹಳ್ಳಿ ಗ್ರಾಮದ ಮನೆಗಳಿಗೆ ಭೇಟಿ ನೀಡಿ ಇ-ಕೆವೈಸಿ ಪ್ರಕ್ರಿಯೆಯನ್ನು ನಿರ್ವಹಿಸಿದರು.

ನರೇಗಾ ಯೋಜನೆಯ ವಿಶ್ವಾಸಾರ್ಹತೆ ಹಾಗೂ ಪಾರದರ್ಶಕತೆ ಹೆಚ್ಚಿಸುವ ನಿಟ್ಟಿನಲ್ಲಿ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಂಡರೆ ಕೂಲಿ ಪಾವತಿಗೆ ವೇಗ ಸಿಗಲಿದೆ. ಈ ಪ್ರಕ್ರಿಯೆಯಲ್ಲಿ ಫೇಸ್ ಅಥೆಂಟಿಕೇಶನ್ ಮೂಲಕ ಮಾಹಿತಿಯನ್ನು ನಿಖರವಾಗಿ ದಾಖಲಿಸಬಹುದು. ಕಾಮಗಾರಿ ನಂತರ ಕೂಲಿಕಾರರ ಫೋಟೊ ಮತ್ತವರ ಆಧಾರ್ ಸಂಖ್ಯೆಯೊಂದಿಗೆ ಹಾಜರಾತಿ ದೃಢೀಕರಣವು ನಡೆಯಲಿದೆ.

ಎನ್ ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಂ) ಇ-ಕೆವೈಸಿ ಪ್ರಕ್ರಿಯೆ ನರೇಗಾ ಕೂಲಿಕಾರರಿಗೆ ಕಡ್ಡಾಯವಾಗಿದ್ದು, ಮುಂಡರಗಿ ತಾಲೂಕಿನಲ್ಲಿ ಈ ಪ್ರಕ್ರಿಯೆ ಜಾರಿಯಲ್ಲಿದೆ. ತೀವ್ರತರದಲ್ಲಿ ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ತಾ.ಪಂ ಇಓ ವಿಶ್ವನಾಥ ಅವರು, ಬೆಣ್ಣಿಹಳ್ಳಿ ಗ್ರಾಮದ ನರೇಗಾ ಕೂಲಿಕಾರರ ಮನೆಗೆ ಭೇಟಿ ನೀಡಿ ಖುದ್ದು ತಾವೇ ಮೊಬೈಲ್ ಮೂಲಕ ಪ್ರಕ್ರಿಯೆಯನ್ನು ನಿರ್ವಹಿಸಿದರು.

ನರೇಗಾ ಯೋಜನೆ ಮೂಲಕ ಗ್ರಾಮೀಣ ಜನರಿಗೆ, ಕೂಲಿಕಾರರಿಗೆ 100 ದಿನಗಳ ಉದ್ಯೋಗ ಖಾತ್ರಿಯಾಗಿದ್ದು, ಪಾರದರ್ಶಕತೆಯಿಂದ ಕೇಂದ್ರ ಹಾಗೂ ರಾಜ್ಯ ಸರಕಾರಗಳ ಮಹತ್ವಾಕಾಂಕ್ಷಿ ಯೋಜನೆಯ ಕಾಮಗಾರಿಗಳ ಸಮರ್ಪಕ ಅನುಷ್ಠಾನದ ಜೊತೆಗೆ ಪಾರದರ್ಶಕ ಹಾಜರಾತಿಗೆ ಇ-ಕೆವೈಸಿ ವಿಧಾನ ವರದಾನವಾಗಿದೆ.

# ಸತ್ಯ ಸಂಸ್ಕೃತಿಯಿಂದ ಜೀವನಕ್ಕೆ ಬೆಲೆ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಚಂಚಲವಾದ ಮನಸ್ಸನ್ನು ತಣ್ಣಗಿಡುವ ಜೀವನ ಮಾರ್ಗವೇ ಆಧ್ಯಾತ್ಮ. ಬದುಕು ಬಲಗೊಳ್ಳಲು ಆಧ್ಯಾತ್ಮದ ಅರಿವು, ಸಾಧನೆ ಮತ್ತು ಪ್ರಯತ್ನ ಬೇಕು. ಸತ್ಯ ಸಂಸ್ಕೃತಿಯನ್ನು ಗೌರವಿಸದೇ ಹೋದರೆ ಜೀವನ ನಾಶಗೊಳ್ಳುತ್ತದೆ. ಸತ್ಯ ಸನಾತನ ಸಂಸ್ಕೃತಿಯನ್ನು ಗೌರವಿಸುವುದರಿಂದ ಜೀವನಕ್ಕೆ ಬೆಲೆ-ನೆಲೆ ಪ್ರಾಪ್ತವಾಗುತ್ತದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಸುಖಕ್ಕೊಂದು ಅರ್ಥ ಬರುವುದು ಕಷ್ಟದಿಂದ. ಸಂಪಾದಿಸಿದ ಆಸ್ತಿ, ಗಳಿಸಿದ ಸಂಪತ್ತು ಶಾಶ್ವತವೆಂದು ಮನುಷ್ಯ ತಿಳಿದಿದ್ದಾನೆ. ಸತ್ಯದ ಸತ್ಪಥದಲ್ಲಿ ಜೀವನ ವಿಕಾಸಗೊಳ್ಳಬೇಕು. ಒಂದು ಧರ್ಮ ಇನ್ನೊಂದು ಧರ್ಮದ ಆ ಸತ್ಯವನ್ನು ಪರಿಗಣಿಸದಿದ್ದರೂ ಸತ್ಯ ಬದಲಾಗುವುದಿಲ್ಲ. ವಸ್ತು, ಒಡವೆಗಳ ಹೊರ ರೂಪ ಬದಲಾಗಬಹುದು. ಆದರೆ ಒಳಗಿರುವ ಮೂಲ ಸತ್ಯ ಬದಲಾಗುವುದಿಲ್ಲ. ಕಾಲಿಗೆ ಆದ ಗಾಯ ಹೇಗೆ ನಡೆಯಬೇಕೆಂಬುದುನ್ನು ಕಲಿಸುತ್ತದೆ. ಮನಸ್ಸಿಗೆ ಆದ ಗಾಯ ಹೇಗೆ ಬದುಕಬೇಕೆಂಬುದನ್ನು ತಿಳಿಸುತ್ತದೆ. ದೊಡ್ಡದಾಗಿ ಹೊತ್ತಿ ಉರಿಯುವ ದೀಪ ಬಹಳ ಹೊತ್ತು ಬೆಳಗುವುದಿಲ್ಲ. ನಂದಾದೀಪ ನಿಧಾನವಾಗಿ ಬಹಳ ಹೊತ್ತು ಉರಿದು ಬೆಳಕು ನೀಡುವುದು. ಬದುಕಿನಲ್ಲಿ ಸಾಧಿಸುವ ಗುರಿ ಹೊತ್ತು ಆತ್ಮ ವಿಶ್ವಾಸದಿಂದ ಮುನ್ನಡೆಯುವುದರಿಂದ ಶ್ರೇಯಸ್ಸು ಪ್ರಾಪ್ತವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ಕಲಬುರ್ಗಿ ಜಿಲ್ಲೆ ಯಡ್ರಾಮಿ ತಾಲೂಕಿನ ಶ್ರೀಮದ್ ರಂಭಾಪುರಿ ಶಾಖಾ ಮಾಗಣಗೇರಿ ಶ್ರೀ ರುದ್ರಮುನೀಶ್ವರ ಹಿರೇಮಠಕ್ಕೆ ವಿದ್ಯಾ ವಿನಯ ಸಂಪನ್ನರಾದ ದಾನಯ್ಯ ದೇವರನ್ನು ನಿಯುಕ್ತಿಗೊಳಿಸಿ ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಈ ಅಪೂರ್ವ ಸಮಾರಂಭದಲ್ಲಿ ಸಂಗೊಳ್ಳಿ, ಆಲೂರು, ಮಾದನಹಿಪ್ಪರಗಿ, ತೇರದಾಳ, ಐನಾಪುರ ಶ್ರೀಗಳು ಮತ್ತು ಮಾಗಣಗೇರಿ ಗೊಲ್ಲಾರಪ್ಪಗೌಡ ಮಾಲಿ ಪಾಟೀಲ ಮತ್ತು ಅನೇಕ ಗಣ್ಯರು, ತೇರದಾಳ, ಜಮಖಂಡಿ, ಸಿಂದಗಿ, ಕರಜಗಿ ಮೊದಲಾದ ಗ್ರಾಮಗಳಿಂದ ಆಗಮಿಸಿದ ಭಕ್ತರು ಪಾಲ್ಗೊಂಡಿದ್ದರು.

# ತಾಲೂಕು ಘಟಕಕ್ಕೆ ಆಯ್ಕೆ





■ವಿಜಯಸಾಕ್ಷಿ ಸುದ್ದಿ, ರೋಣ

ಅಖಿಲ ಕರ್ನಾಟಕ ಅನುದಾನಿತ ಶಾಲಾ-ಕಾಲೇಜುಗಳ ನೌಕರರ ಸಂಘದ ರೋಣ ತಾಲೂಕು ಘಟಕದ ನೂತನ ಅಧ್ಯಕ್ಷರಾಗಿ ಮೆಣಸಗಿಯ ಶರಣಬಸವೇಶ್ವರ ಪ್ರಾಥಮಿಕ ಶಾಲೆಯ ಶಿಕ್ಷಕ ಬಿ.ಬಿ. ಮೇಗಲಮನಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಹೊಳೆಆಲೂರಿನ ಯಚ್ಚರೇಶ್ವರ ಪ್ರಾಥಮಿಕ ಶಾಲೆಯ ಶಿಕ್ಷಕ ಎಸ್.ಕೆ. ಆಡಿನ ಆಯ್ಕೆಯಾಗಿದ್ದಾರೆಂದು ಜಿಲ್ಲಾಧ್ಯಕ್ಷ ಬಸವರಾಜ ಕೊರ್ಲಹಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಯ್ಲರ್ ಸ್ಫೋಟಗೊಂಡು ಬಾಲಕಿ ಸಾವು; ಮೂವರು ಗಂಭೀರ

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಹೊನ್ನಾಳಿ ಪಟ್ಟಣದ ದುರ್ಗಿಗುಡಿ ಉತ್ತರ ಭಾಗದ ಮನೆಯಲ್ಲಿ ಬಾಯ್ಲರ್ ಸ್ಫೋಟಗೊಂಡು 11 ವರ್ಷದ ಬಾಲಕಿ ಸಾವನ್ನಪ್ಪಿದ್ದು, ಮೂವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಜರುಗಿದೆ.

11 ವರ್ಷದ ಸ್ವೀಕೃತಿ ಮೃತ ಬಾಲಕಿ. ತೀರ್ಥಿಬಾಯಿ, ಹೂವಾ ನಾಯ್ಕ್, ಸುನೀತಾ ಬಾಯಿ ಗಂಭೀರವಾಗಿ ಗಾಯಗೊಂಡಿದ್ದಾರೆ.

## ಪುರಸಭೆ ಉಮಾ ವಿದ್ಯಾಲಯ ಪ್ರೌಢಶಾಲೆಗೆ ಶತಮಾನೋತ್ಸವ ಸಂಭ್ರಮ | ಸಿದ್ಧತೆಗಾಗಿ ಪೂರ್ವಭಾವಿ ಸಭೆ

# ಶಾಲೆಯ ಸಮಗ್ರ ಅಭಿವೃದ್ಧಿಗೆ ಕಟಿಬದ್ಧರಾಗೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

1926ರಲ್ಲಿ ಆರಂಭವಾಗಿ 2026ಕ್ಕೆ ಶತಮಾನ ಪೂರೈಸಲಿರುವ ಪಟ್ಟಣದ ಪುರಸಭೆ ಉಮಾ ವಿದ್ಯಾಲಯ ಪ್ರೌಢಶಾಲೆಯ ಶತಮಾನೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ಇಲ್ಲಿನ ಜಗದ್ಗುರು ವೀರಗಂಗಾಧರ ರಂಭಾಪುರಿ ಸಮುದಾಯ ಭವನದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.



ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ನೂರು ವರ್ಷ ಪೂರೈಸುತ್ತಿರುವ ಪುರಸಭೆಯ ಉಮಾ ವಿದ್ಯಾಲಯ ಪ್ರೌಢಶಾಲೆ ಸಹಸ್ರಾರು ಜನರಿಗೆ ವಿದ್ಯೆ-ಬದುಕು ನೀಡಿದೆ. ಇಲ್ಲಿ ಕಲಿತ ವಿದ್ಯಾರ್ಥಿಗಳು ದೇಶ-ವಿದೇಶಗಳಲ್ಲಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುನ್ನತ ಸ್ಥಾನದಲ್ಲಿದ್ದಾರೆ. ಕಲಿಸಿದ ಗುರುಗಳು ಮತ್ತು ಕಲಿತ ಶಾಲೆಯನ್ನೂ ಎಂದಿಗೂ ಮರೆಯಬಾರದು ಮತ್ತು ಈ ಬಗ್ಗೆ ಅಭಿಮಾನವಿರಲಿ. ಸದ್ಯ ನಾವು ಕಲಿತ ಶಾಲೆ ಶತಮಾನೋತ್ಸವದ ಸಂಭ್ರಮದ ಹೊಸ್ತಿಲಲ್ಲಿ ಇರುವುದು ನಮಗೆಲ್ಲ ಸಂತಸದ ವಿಷಯ. ಆದರೆ ಇದೀಗ ಶಿಕ್ಷಣ ಕ್ಷೇತ್ರದಲ್ಲಿನ ಬದಲಾವಣೆಯಿಂದ ಈ ಶಾಲೆಯಲ್ಲಿ ಮಕ್ಕಳ ಕೊರತೆಯ ಜತೆಗೆ ಹತ್ತಾರು ಸಮಸ್ಯೆಗಳು ತಲೆದೂರಿರುವುದು ನೋವಿನ ಸಂಗತಿ. ಕಾರಣ ಈವರೆಗೆ ಶಾಲೆಯಲ್ಲಿ ಓದಿದ ಎಲ್ಲ ಹಳೆಯ ವಿದ್ಯಾರ್ಥಿಗಳು ಸೇರಿ ಶಾಲೆಯ ಸಮಗ್ರ ಅಭಿವೃದ್ಧಿ, ಶ್ರೇಯೋಭಿವೃದ್ಧಿಗೆ ಕಂಕಣಬದ್ಧರಾಗುವ ಮೂಲಕ ಶತಮಾನೋತ್ಸ ಸಂಭ್ರಮವವನ್ನು ಸಡಗರದಿಂದ ಆಚರಿಸೋಣ ಎಂದು ಹೇಳಿದರು. ವಕೀಲ ಬಿ.ಎಸ್. ಬಾಳೇಶ್ವರಮಠ ಮಾತನಾಡಿ, ನಾವು ಕಲಿತ ಶಾಲೆ ನೂರು ವರ್ಷ ಪೂರೈಸಿರುವುದು ನಮಗೆಲ್ಲ ಹೆಮ್ಮೆಯ ಸಂಗತಿ. ಶಾಲೆಯ ಶತಮಾನೋತ್ಸವವನ್ನು ಅದ್ದೂರಿಯಾಗಿ ಆರಿಸುವುದು ನಮ್ಮ ಕರ್ತವ್ಯ. ಈ ಹಿನ್ನೆಲೆಯಲ್ಲಿ ಶತಮಾನೋತ್ಸವ ಆಚರಣೆಯ ವಿವಿಧ ಸಮಿತಿಗಳನ್ನು ರಚಿಸಬೇಕು. ಈಗಾಗಲೇ ಹಳೇ ವಿದ್ಯಾರ್ಥಿಗಳ ಹತ್ತಾರು ಸಂಘಟನೆಗಳು ಇದ್ದು, ಅವುಗಳನ್ನು ಒಟ್ಟುಗೂಡಿಸಿ ಹೊಸ ವಾಟ್ಸಪ್ ಗ್ರುಪ್ ರಚಿಸಿ ಎಲ್ಲರಿಗೂ ಮಾಹಿತಿ ತಲುಪುವಂತೆ ವ್ಯವಸ್ಥೆ ಮಾಡಬೇಕು ಎಂದು ಸಲಹೆ ನೀಡಿದರು.

ಚನ್ನಪ್ಪ ಜಗಲಿ ಮಾತನಾಡಿ, ನಾವು ಅಭ್ಯಾಸ ಮಾಡಿದ ಶಾಲೆಯ ಕಟ್ಟಡ ಸಾಕಷ್ಟು ಶಿಥಿಲಗೊಂಡಿದ್ದು, ಮೊದಲು ಅದನ್ನು ದುರಸ್ತಿ ಮಾಡಿಸಲು ಕ್ರಮ ಕೈಗೊಳ್ಳಬೇಕು. ನಂತರ ಸಮಾರಂಭದ ಕುರಿತು ಸಮಿತಿಗಳನ್ನು ಮಾಡಿ ಆಯಾ ಸಮಿತಿಗೆ ಜವಾಬ್ದಾರಿ ಒಪ್ಪಿಸಬೇಕು ಎಂದರು. ನಿವೃತ್ತ ಶಿಕ್ಷಕ ಸಾಹಿತಿ ಪೂರ್ಣಾಜಿ ಖರಾಟೆ ಮಾತನಾಡಿ, ಉಚ್ಛ್ರಾಯ ಸ್ಥಿತಿಯಲ್ಲಿದ್ದ ಪುರಸಭೆ ಉಮಾ ವಿದ್ಯಾಲಯ ಇಂದು ವಿದ್ಯಾರ್ಥಿಗಳಿಲ್ಲದೆ ನರಳುತ್ತಿದೆ. ಆದರೆ ಶಾಲೆಗೆ ಮತ್ತೆ ಹಳೆಯ ವೈಭವ ತಂದುಕೊಡಲು ಎಲ್ಲರೂ ಪ್ರಾಮಾಣಿಕವಾಗ ಪ್ರಯತ್ನಿಸೋಣ ಎಂದು ತಿಳಿಸಿದರು.

ಡಿ.ಬಿ. ಬಳಿಗಾರ, ಬಸವೇಶ ಮಹಾಂತಶೆಟ್ಟರ, ಓಂಪ್ರಕಾಶ ಜೈನ, ಆರ್.ಸಿ. ಪಾಟೀಲ, ಆನಂದ ಮೆಕ್ಕಿ, ಬಸವರಾಜ ಬೆಂಡಿಗೇರಿ, ಸೋಮೇಶ ಉಪನಾಳ, ನಾಗರಾಜ ಹಣಗಿ, ರಮೇಶ ನವಲೆ, ಎಸ್.ಎಫ್. ಆದಿ ಮತ್ತಿತರರು ಮಾತನಾಡಿದರು. ಶಾಲೆಯಲ್ಲಿ ಕಲಿತ ನೂರಾರು ಹಳೆಯ ವಿದ್ಯಾರ್ಥಿಗಳು ಸಭೆಯಲ್ಲಿ ಭಾಗವಹಿಸಿದ್ದರು.

> ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಒಂದು ಕಾಲದಲ್ಲಿ ಅತ್ಯಂತ ಉತ್ತುಂಗದಲ್ಲಿದ್ದ ನಮ್ಮ ಶಾಲೆ ಇಂದು ಮಕ್ಕಳಿಲ್ಲದೆ ಕೊರಗುತ್ತಿದೆ. ಅದರೊಂದಿಗೆ ಶಾಲೆಯ ಕಟ್ಟಡವೂ ಹಾಳಾಗಿದೆ. ಎಲ್ಲರ ಸಹಾಯ-ಸಹಕಾರದಿಂದ ಶಾಲೆಯನ್ನು ಜೀರ್ಣೋದ್ಧಾರಗೊಳಿಸಿ ಶತಮಾನೋತ್ಸವವನ್ನು ಅದ್ದೂರಿಯಾಗಿ ಆಚರಿಸೋಣ. ಅದಕ್ಕಾಗಿ ಎಲ್ಲರೂ ಬೇಧ-ಭಾವ ಮರೆತು ಒಗ್ಗಟ್ಟಿನಿಂದ ಸ್ವಪ್ರೇರಣೆಯೊಂದಿಗೆ ಪಾಲ್ಗೊಂಡು ಶತಮಾನೋತ್ಸವ ಯಶಸ್ವಿಗೊಳಿಸೋಣ ಎಂದು ತಿಳಿಸಿದರು.

## ಎಫ್ಎಕ್ಯೂ ಗುಣಮಟ್ಟದ ಶೇಂಗಾ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

# ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತ-ರಿಂದ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.



ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಇತ್ತೀಚೆಗೆ 2025-26ನೇ ಸಾಲಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಶೇಂಗಾ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಎಕರೆಗೆ 3 ಕ್ವಿಂಟಲ್‌ನಂತೆ ಗರಿಷ್ಟ 15 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಖರೀದಿಸಲು ಹಾಗೂ ಶೇಂಗಾ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಶೇಂಗಾ ಉತ್ಪನ್ನವನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗವಾಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಶೇಂಗಾ ಖರೀದಿ ಪ್ರಕ್ರಿಯೆಯಲ್ಲಿ ಎಫ್.ಎ.ಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಲಭ್ಯವಿರುವ ಅಧಿಕಾರಿ/ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ತರಬೇತಿ ಅವಶ್ಯವಿದ್ದಲ್ಲಿ ಅಂತಹ ಸಿಬ್ಬಂದಿಗಳಿಗೆ ಎಫ್.ಎ.ಕ್ಯೂ ಗ್ರೇಡಿಂಗ್ ತರಬೇತಿ ನೀಡಲು ಸಂಬಂಧಪಟ್ಟ ಖರೀದಿ ಸಂಸ್ಥೆಗಳು ಕ್ರಮ ವಹಿಸಬೇಕು. ಸರ್ಕಾರ ಬೆಂಬಲ ಬೆಲೆಯಲ್ಲಿ ಶೇಂಗಾ ಹುಟ್ಟುವಳಿಯ ಖರೀದಿ ಕುರಿತು ರೈತರು ಸದುಪಯೋಗ ಪಡೆದುಕೊಳ್ಳಲು ರೈತರಿಗೆ ತಿಳುವಳಿಕೆ ನೀಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಗದಗ ಜಿಲ್ಲೆಯ ರೈತರು ಯೋಜನೆಯ ಲಾಭ ಪಡೆಯಲು ಅನುಕೂಲವಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕಿ ಸುಧಾ ಬಂಡಿ ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 7263ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸದರಿ ಆದೇಶ ಹೊರಡಿಸಿದ ದಿನಾಂಕದಿಂದ ರೈತರ ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಸರ್ಕಾರದ ಆದೇಶದನುಸಾರ ನ್ಯಾಫೆಡ್ ಸಂಸ್ಥೆ ಹಾಗೂ ಎನ್.ಸಿ.ಸಿ.ಎಫ್. ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆಓಎಫ್) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯನ್ನಾಗಿ ನೇಮಿಸಿದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> **ಶೇಂಗಾ ಖರೀದಿ ಕೇಂದ್ರಗಳ ಸ್ಥಳ**
>
> ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘಗಳು: ಗದಗ ತಾಲೂಕಿನ ಬಳಗಾನೂರ, ಹೊಂಬಳ, ಮುಳಗುಂದ; ಶಿರಹಟ್ಟಿ ತಾಲೂಕಿನ ರಣತೂರ, ಶಿಗ್ಲಿ; ರೋಣ ತಾಲೂಕಿನ ಅಬ್ಬಿಗೇರಿ, ಗಜೇಂದ್ರಗಡ; ನರಗುಂದ ತಾಲೂಕಿನ ಕಣಕಿಕೊಪ್ಪ, ಮುಂಡರಗಿ ತಾಲೂಕಿನ ಬರದೂರು, ಕಲಕೇರಿ.

# ವಾಲ್ಮೀಕಿ ಸಾಮಾಜಿಕ ನ್ಯಾಯದ ಹರಿಕಾರರು



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿ, ಧರ್ಮ, ಸಮಾಜ, ಜೀವನ ಮೌಲ್ಯಗಳ ಹಿರಿಮೆಯನ್ನು 'ರಾಮಾಯಣ' ಕಾವ್ಯದ ಮೂಲಕ ಜಗತ್ತಿಗೆ ಪರಿಚಯಿಸಿರುವ ಮಹರ್ಷಿ ವಾಲ್ಮೀಕಿ ಸಾರ್ವಕಾಲಿಕ ಸಂತರಾಗಿದ್ದು, ಮಾನವರು ಸತ್ಯ, ಧರ್ಮ, ತ್ಯಾಗ, ಕರುಣೆ, ಸಹಾನುಭೂತಿ ಇತ್ಯಾದಿ ಆದರ್ಶಗಳನ್ನು ಕಾವ್ಯದಲ್ಲಿ ವಿವಿಧ ಪಾತ್ರಗಳ ಮೂಲಕ ಚಿತ್ರಿಸಿರುವ ಅವರ ಬರವಣಿಗೆ ಕಲೆ ಇಂದಿಗೂ ಆದರ್ಶವಾಗಿದೆ ಎಂದು ಪ್ರೊ. ಸುಧಾ ಕೌಜಗೇರಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಸತ್ಯ ಮತ್ತು ಸಾಮಾಜಿಕ ನ್ಯಾಯದ ಹರಿಕಾರ ಮಹರ್ಷಿ ವಾಲ್ಮೀಕಿ ಅವರ ಚಿಂತನೆಗಳು, ವಿಚಾರಗಳು, ಸಂದೇಶಗಳು ಇಂದು ತುಂಬಾ ಪ್ರಸ್ತುತವಾಗಿವೆಯೆಂದು ಹೇಳಿದರು.

ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್ ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ರಾಮಾಯಣ ಮಹಾಕಾವ್ಯದ ಚಾರಿತ್ರಿಕ, ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಮಹತ್ವವನ್ನು ಪರಿಚಯಿಸುತ್ತ, ಪಾಶ್ಚಾತ್ಯ ಸಂಸ್ಕೃತಿ, ವಿಚಾರ, ಸಿದ್ಧಾಂತ, ವಾದಗಳ ಪ್ರಭಾವದಿಂದ ಕಲುಷಿತವಾಗುತ್ತಿರುವ ಮನಸ್ಸುಗಳಿಗೆ ಈ ಮಹಾಕಾವ್ಯದ ಓದು ಅಗತ್ಯವಾಗಿದೆ ಎಂದು ಹೇಳಿದರು. ಕನ್ನಡ ಪ್ರಾಧ್ಯಾಪಕ ಮತ್ತು ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ ರಾಮಾಯಣ ಮಹಾಕಾವ್ಯದ ಭಾಷೆ, ಸಾಹಿತ್ಯದ ಕುರಿತು ಮಾತನಾಡಿದರು.

ಉಮೇಶ ಹುಯಿಲಗೋಳ ಪೂಜೆ ನೆರವೇರಿಸಿದರು. ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಮತ್ತು ಆಂತರಿಕ ಪರೀಕ್ಷಾ ಸಂಚಾಲಕ ಪ್ರೊ. ಲಕ್ಷ್ಮಣ ಮುಳಗುಂದ ನಿರೂಪಿಸಿದರು. ರಾಜ್ಯಶಾಸ್ತ್ರ ಪ್ರಾಧ್ಯಾಪಕ ಮತ್ತು ಕ್ರೀಡಾ ಸಂಚಾಲಕ ಮಹಾಂತೇಶ ವಂದಿಸಿದರು.


# ಇಂದು ವಿಶೇಷ ಸಹಕಾರ ತರಬೇತಿ ಶಿಬಿರ

▶▶ಮೊದಲನೇ ಪುಟದಿಂದ

ಸಹಕಾರ ಯೂನಿಯನ್‌ನ ನಿರ್ದೇಶಕರುಗಳಾದ ಎಸ್. ಕೆ. ಕುರಡಗಿ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಗದಗ ಉಪನಿರ್ದೇಶಕರಾದ ಅರವಿಂದ ಎನ್. ನಾಗಜ್ಜನವರ, ಸಹಕಾರ ಸಂಘಗಳ ಸಹಾಯಕ ನಿಬಂಧಕಿಯರಾದ ಶ್ರೀಮತಿ ಪುಷ್ಪಾ ಕೆ. ಕಡಿವಾಳ, ಶಿರಹಟ್ಟಿ, ಮುಂಡರಗಿ, ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕರಿಗಳಾದ ಕೆ. ಸಿ. ಕೂಸನೂರಮಠ, ಚಂದ್ರಶೇಖರ ಲಮಾಣಿ, ಸಹಕಾರ ಸಂಘಗಳ ಸಹಾಯಕ ನಿಬಂಧಕ ಕಚೇರಿ ಗದಗ ಮಾರಾಠಾಧಿಕಾರಿಗಳಾದ ಬಿ. ಆರ್. ನಿಡಗುಂದಿ, ಗದಗ ಹಾಗೂ ನರಗುಂದ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಾದ ಶ್ರೀಮತಿ ಶಾಂತಾ, ಎಚ್. ಎಂ., ಪ್ರಕಾಶ ನವಲಗುಂದ, ಕೆ.ಸಿ.ಸಿ ಬ್ಯಾಂಕ್ ಲಿ., ಗದಗ ಇದರ ಪ್ರಭಾರ ಡಿ.ಸಿ.ಓ. ಸುನೀಲಕುಮಾರ ವ್ಹಿ. ಚಳಗೇರಿ, ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ ಎಸ್. ಪಟ್ಟೇದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಚಂದ್ರಶೇಖರ ಎಸ್. ಕರಿಯಪ್ಪನವರ ತಿಳಿಸಿದ್ದಾರೆ.

ತರಬೇತಿ ಕಾರ್ಯಾಗಾರದಲ್ಲಿ ಸಹಕಾರ ಸಂಘಗಳ ಆಡಳಿತ ಮಂಡಲಿ ಚುನಾವಣೆ ಜರುಗಿಸುವ ವಿಧಿ ವಿಧಾನಗಳ ಕುರಿತು. ಶಂಕರ ಎಸ್. ಕರಬಸಣ್ಣವರ ಸಹಕಾರ ಅಭಿವೃದ್ಧಿ ಅಧಿಕಾರಿಗಳು, ರಾಯಬಾಗ ಜಿ.ಬೆಳಗಾವಿ, ಸಹಕಾರ ಸಂಘಗಳ ಪದಾಧಿಕಾರಿಗಳ ಚುನಾವಣೆ ಜರುಗಿಸುವ ಕುರಿತು ಪ್ರಶಾಂತ ಮುಧೋಳ ಸಹಕಾರ ಅಭಿವೃದ್ಧಿ ಅಧಿಕಾರಿಗಳು, ರೋಣ ಇವರು ಉಪನ್ಯಾಸ ನೀಡುವರು.

# ಜಗದ್ಗುರುಗಳ 43ನೇ ಪುಣ್ಯಾರಧಾನೆ ನಾಳೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೋಮೇಶ್ವರ ತೇರಿನ ಮನೆ ಹತ್ತಿರದ ಶ್ರೀ ಇಟಗಿ ಬಸವೇಶ್ವರ ದೇವಸ್ಥಾನದಲ್ಲಿ ಅ.10ರಂದು ಮಧ್ಯಾಹ್ನ 12ಕ್ಕೆ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳ 43ನೇ ಪುಣ್ಯಾರಾಧನೆ ಮಹೋತ್ಸವ ಮತ್ತು ಧರ್ಮಜಾಗೃತಿ ಸಮಾರಂಭ ಜರುಗಲಿದೆ ಎಂದು ಪಂಚಾಚಾರ್ಯ ಭಜನಾ ಸಂಘ ಮತ್ತು ಭಕ್ತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

# ಸಮುದಾಯ ಭವನ ಕಟ್ಟಡಕ್ಕೆ ದೇಣಿಗೆ



■ವಿಜಯಸಾಕ್ಷಿ ಸುದ್ದಿ, ಗದಗ


ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕವು ನಿರ್ಮಿಸುತ್ತಿರುವ ಸಮುದಾಯ ಭವನದ ಕಟ್ಟಡ ನಿರ್ಮಾಣಕ್ಕೆ ಗದುಗಿನ ಗಣ್ಯ ವ್ಯಾಪಾರಸ್ಥರು, ಧರ್ಮಾಭಿಮಾನಿಗಳೂ ಆದ ಶಿವಣ್ಣ ಬಸಪ್ಪ ಗುಗ್ಗರಿ ಅವರು 51 ಸಾವಿರ ರೂ.ಗಳ ದೇಣಿಗೆ ನೀಡಿದ್ದಾರೆ.

ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರಿಗೆ 51 ಸಾವಿರ ರೂ.ಗಳ ಚೆಕ್ ನೀಡಿದ ಶಿವಣ್ಣ ಅವರು, ಸಮುದಾಯ ಭವನ ಮಾದರಿ ರೀತಿಯಲ್ಲಿ ನಿರ್ಮಾಣಗೊಳ್ಳಲಿ ಎಂದು ಶುಭ ಕೋರಿದರು.

ಚೆಕ್ ಸ್ವೀಕರಿಸಿದ ಗುಡಿಮನಿ, ಕಟ್ಟಡ ನಿರ್ಮಾಣ ಕಾರ್ಯಕ್ಕೆ ಹಲವಾರು ದಾನಿಗಳು ಈಗಾಗಲೇ ವಾಗ್ದಾನ ಮಾಡಿದ್ದು, ದಾನಿಗಳ ಹಾಗೂ ಸಂಸದ, ಸಚಿವರ, ವಿಧಾನ ಪರಿಷತ್ ಸದಸ್ಯರಿಂದ ಅನುದಾನ ಮಂಜೂರು ಮಾಡುವಂತೆ ಮನವಿ ಸಲ್ಲಿಸಲಾಗಿದೆ. ಸಾಧ್ಯವಾದಷ್ಟು ಶೀಘ್ರದಲ್ಲಿ ಕಟ್ಟಡ ಸುಂದರವಾಗಿ ರೂಪುಗೊಳ್ಳಲು ಯೋಜನೆ ರೂಪಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ, ಕೋಶಾಧ್ಯಕ್ಷ ಚನ್ನವೀರಪ್ಪ ಹುಣಶೀಕಟ್ಟಿ, ರುದ್ರಮುನಿ ಹಿರೇಮಠ ಉಪಸ್ಥಿತರಿದ್ದರು. ಸಮುದಾಯ ಭವನ ಕಟ್ಟಡ ಸಮಿತಿಯ ಗೌರವಾಧ್ಯಕ್ಷ ಸದಾಶಿವಯ್ಯ ಮದರಿಮಠ, ಅಧ್ಯಕ್ಷ ಕಿರಣ ಭೂಮಾ ದಾನಿಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

# ಸಮಾನತೆ ಸಾರಿದ ಶ್ರೀ ಮಹರ್ಷಿ ವಾಲ್ಮೀಕಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಸಮಾಜದಲ್ಲಿ ವ್ಯಕ್ತಿ ಹೇಗೆ ಬದುಕಬೇಕೆಂಬುದನ್ನು ತಮ್ಮ ರಾಮಾಯಣ ಮಹಾಕಾವ್ಯದಲ್ಲಿ ಮಹರ್ಷಿ ವಾಲ್ಮೀಕಿ ಅವರು ಅದ್ಭುತವಾಗಿ ಚಿತ್ರಿಸಿದ್ದಾರೆ ಎಂದು ಉಪತಹಸೀಲ್ದಾರ ಎಸ್.ಎಸ್. ಬಿಚ್ಚಾಲಿ ಹೇಳಿದರು.

ಡಂಬಳ ಗ್ರಾಮದ ಉಪತಹಸೀಲ್ದಾರ ಕಚೇರಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಸಮಾಜದಲ್ಲಿ ಸಹೋದರತ್ವ, ಸಮಾನತೆ ಇರಬೇಕೆಂಬ ಉದ್ದೇಶದಿಂದ ರಾಮಾಯಣ ಕಾವ್ಯದಲ್ಲಿ ರಾಮ ರಾಜ್ಯದ ಪರಿಕಲ್ಪನೆಯನ್ನು ಬರೆದಿದ್ದಾರೆ. ಅದರಂತೆ ನಾವೆಲ್ಲರೂ ಒಂದೇ ಎಂಬ ಸಂಕಲ್ಪ, ಸಹೋದರತೆ, ಜೀವನ ನಡೆಸಿದಾಗ ಮಾತ್ರ ಇಂತಹ ಜಯಂತಿಗಳಿಗೆ ಅರ್ಥ ಬರುತ್ತದೆ. ಮಹರ್ಷಿ ವಾಲ್ಮೀಕಿ ಅವರ ಬದುಕಿನ ಸರ್ವಶ್ರೇಷ್ಠವಾದ ಮೌಲ್ಯಗಳನ್ನು ಪ್ರತಿಬಿಂಬಿಸುವ ರಾಮಾಯಣದಂತಹ ಮಹಾಕಾವ್ಯವನ್ನು ರಚಿಸುವ ಮೂಲಕ ಜಗದ ಜನರು ಉತ್ತಮ ಜೀವನ ನಡೆಸಲು ಮುನ್ನುಡಿ ಬರೆದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ಪ್ರಭು ಬಾಗಲಿ, ಗ್ರಾಮ ಆಡಳಿತ ಅಧಿಕಾರಿ ಯೋಗೇಶ ಕುರಹಟ್ಟಿ, ಸಿಬ್ಬಂದಿ ಎಂ.ಎಂ. ವಿಭೂತಿ, ಹನಮಂತ ಗುಜ್ಜಲರ, ವಸಂತ ಕುಲಕರ್ಣಿ, ತಿಮ್ಮಣ್ಣ ವಡ್ಡರ, ನಾಗಪ್ಪ ಕೊರವರ, ದೇವಪ್ಪ ಪೂಜಾರ, ರಫಿ ಬೂದಿಹಾಳ, ಮಲ್ಲಪ್ಪ ಮಾದರ, ರಫಿ ಸೊರಟೂರ ಇದ್ದರು.

# ನಿಧನ

## ಪದ್ಮಬಾಯಿ ರಾಯಭಟ್ಟನವರ



**ಹುಲಕೋಟಿ:** ಶ್ರೀ ರಾಜೇಶ್ವರಿ ವಿದ್ಯಾನಿಕೇತನದ ಪ್ರಿನ್ಸಿಪಾಲರಾದ ವೆಂಕಟೇಶ ಅನಂತ ರಾಯಭಟ್ಟನವರ ಇವರ ಮಾತೋಶ್ರೀಯವರಾದ ಪದ್ಮಬಾಯಿ ಅನಂತ ರಾಯಭಟ್ಟನವರ 82ನೇ ವಯಸ್ಸಿನಲ್ಲಿ ಬುಧವಾರ ಸ್ವಗೃಹದಲ್ಲಿ ದೈವಾಧೀನರಾದರು.

ಮೃತರು ಪುತ್ರ, ಪುತ್ರಿ, ಮೊಮ್ಮಕ್ಕಳು ಹಾಗೂ ಅಪಾರ ಬಂಧು- ಬಳಗವನ್ನು ಅಗಲಿದ್ದಾರೆ. ಪದ್ಮಬಾಯಿ ರಾಯಭಟ್ಟನವರ ಇವರ ನಿಧನಕ್ಕೆ ಶ್ರೀ ರಾಜೇಶ್ವರಿ ವಿದ್ಯಾನಿಕೇತನದ ಆಡಳಿತ ಮಂಡಳಿ ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು ಸಂತಾಪ ಸೂಚಿಸಿದ್ದಾರೆ.

## ನೀಲಪ್ಪ ಜೋಗಿ



**ನರೇಗಲ್ಲ:** ಪಟ್ಟಣದ ಜೋಗಿಯವರ ಓಣಿಯ ನಿವಾಸಿ, ನಿವೃತ್ತ ಶಿಕ್ಷಕ ನೀಲಪ್ಪ ಯಲ್ಲಪ್ಪ ಜೋಗಿ (85) ಮಂಗಳವಾರ ನಿಧನ ಹೊಂದಿದರು.

ಅವರಿಗೆ ಪತ್ನಿ, ಮೂವರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

# ವಿಕೇಂದ್ರೀಕರಣ ವ್ಯವಸ್ಥೆ ಸಮರ್ಪಕವಾಗಿ ಅನುಷ್ಠಾನವಾಗಲಿ

▶▶ಮೊದಲನೇ ಪುಟದಿಂದ

ಅನುಮೋದನೆಗಾಗಿ ಕಳುಹಿಸಲಾಗಿತ್ತಿದೆ. ಮುಂದಿನ ಆರ್ಥಿಕ ವರ್ಷದ ಅಭಿವೃದ್ಧಿ ಯೋಜನೆಗಳಿಗಾಗಿ ನಿಗದಿತ ಅವಧಿಯೊಳಗಾಗಿ ಯೋಜನೆಗಳಿಗೆ ಅನುಮೋದನೆ ಸಿಗಬೇಕಿದೆ ಎಂದರು.

ಹಿರಿಯ ನಿರ್ದೇಶಕ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ ಬಸವರಾಜ ಎಸ್ ಯೋಜನೆ ರೂಪಿಸುವಲ್ಲಿ ವಹಿಸಬೇಕಾದ ಅಂಶಗಳ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾ.ಪಂ, ತಾ.ಪಂ, ವಾರ್ಡ್ ಕುರಿತು ಸಭೆ ನಡೆಸದ ಕುರಿತು ಚರ್ಚೆ ಜರುಗಿತು.

ಈ ವೇಳೆ ಜಿ.ಪಂ ಬೆಳಗಾವಿಯ ಸಿಇಓ ರಾಹುಲ್ ಶಿಂದೆ, ವಿ.ವಿ ಕುಲಪತಿ ಸುರೇಶ ನಾಡಗೌಡರ, ಬಾಗಲಕೋಟೆ ಸಿಇಓ ಶಶೀಧರ ಕುರೇರ, ಹಾವೇರಿ ಸಿಇಓ ರುಚಿ ಬಿಂದಾಲ, ಧಾರವಾಡ ಸಿಇಓ ಭುವನೇಶ ಪಾಟೀಲ, ವಿಜಯಪುರ ಸಿಇಓ ರಿಷಿ ಆನಂದ, ಉತ್ತರ ಕನ್ನಡ ಸಿಇಓ ದಿಲೀಪ್ ಶಶೀ, ಯೋಜನಾ ಇಲಾಖೆ ಜಂಟಿ ಕಾರ್ಯದರ್ಶಿ ಬಿ.ಜಾನಕಿರಾಂ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಇತರರು ಇದ್ದರು.

## ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ. ಬಿ. ಅಸೂಟಿ ಅವರ ಅಧ್ಯಕ್ಷತೆಯಲ್ಲಿ ದಿ. 09-10-2025 ರಂದು ಮುಂಜಾನೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೆಪ್ಟೆಂಬರ್-2025ರ ಅಂತ್ಯದ ವರೆಗಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಲಿದೆ ಎಂದು ಜಿ ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಮೂಲ ದಾಖಲೆಗಳ ಪರಿಶೀಲನೆ


**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸಿನ ದಾಖಲಾತಿ ಪರಿಶೀಲನೆ ನಡೆಯುತ್ತಿದ್ದು, ಮೂಲ ದಾಖಲೆಗಳ ಪರಿಶೀಲನೆಗೆ ನವೆಂಬರ್ 3 ಕೊನೆಯ ದಿನವಾಗಿದೆ. ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕಳಸಾಪುರ ರೋಡ್, ಗದಗ ಇಲ್ಲಿ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ಝರಾಕ್ಸ್ ಪ್ರತಿಯೊಂದಿಗೆ ಹಾಜರಾಗಿ ದಾಖಲೆಗಳ ಪರಿಶೀಲನೆ ಮಾಡಿಸಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in ಜಾಲತಾಣವನ್ನು ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಯಟ್ ನೋಡಲ್ ಅಧಿಕಾರಿಗಳಾದ ಬಿ.ಎಫ್ ಅರವಟಗಿ ಅವರ ಮೊಬೈಲ್ ಸಂಖ್ಯೆ 948217932 ಸಂಪರ್ಕಿಸಬಹುದಾಗಿದೆ.

### ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣ; ಅಹೋರಾತ್ರಿ ಧರಣಿ 3ನೇ ದಿನಕ್ಕೆ

## ಕಾಂಗ್ರೆಸ್ ಸರ್ಕಾರದಿಂದ ಬಂಜಾರ ಜನಾಂಗಕ್ಕೆ ಮೋಸ




> ಬಂಜಾರ ಸಮುದಾಯಕ್ಕೆ ಸರ್ಕಾರ ಘೋರ ಅನ್ಯಾಯ ಮಾಡಿದೆ. ಅವೈಜ್ಞಾನಿಕ ಒಳಮೀಸಲಾತಿಯ ವರ್ಗೀಕರಣವನ್ನು ಕೂಡಲೇ ಕೈಬಿಡಬೇಕು. ಸರ್ಕಾರ ಬಂಜಾರ ಸಮುದಾಯಕ್ಕೆ ಆದ ಅನ್ಯಾಯವನ್ನು ಸರಿಪಡಿಸಬೇಕು.
>
> **-ರವಿಕಾಂತ ಅಂಗಡಿ.**
> ಬಂಜಾರ ಹಕ್ಕು ಸಂರಕ್ಷಣಾ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ.

**■ವಿಜಯಸಾಕ್ಷಿ ಸುದ್ದಿ, ಗದಗ**

ಪರಿಶಿಷ್ಟ ಜಾತಿಗಳಲ್ಲಿನ ಅವೈಜ್ಞಾನಿಕ ಒಳಮೀಸಲಾತಿ ವರ್ಗೀಕರಣದ ವಿರುದ್ಧ ಕರ್ನಾಟಕ ಬಂಜಾರ ಹಕ್ಕು ಸಂರಕ್ಷಣಾ ಸಮಿತಿ ಹಾಗೂ ಜಿಲ್ಲಾ ಬಂಜಾರ ಸಮುದಾಯದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ವೃತ್ತದಿಂದ ಸೋಮವಾರ ಪ್ರಾರಂಭವಾದ ಬೃಹತ್ ಪ್ರತಿಭಟನೆ ಮತ್ತು ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ 3ನೇ ದಿನ ತಲುಪಿದೆ.

ಬುಧವಾರ ಗದಗ ಜಿಲ್ಲೆಯ 72 ತಾಂಡಾಗಳ ಪೈಕಿ ಅವರ ವೇಳಾಪಟ್ಟಿಯಂತೆ ಗದಗ ತಾಲೂಕಿನ ನಾಗಾವಿ ತಾಂಡಾ, ಮುಂಡರಗಿ ತಾಲೂಕಿನ ಶಿಂಗಟರಾಯನಕೆರೆ ತಾಂಡಾ, ಶಿರಹಟ್ಟಿ ತಾಲೂಕಿನ ದೇವಿಹಾಳ ತಾಂಡಾ, ಲಕ್ಷ್ಮೇಶ್ವರ ತಾಲೂಕಿನ ಸುವರ್ಣಗಿರಿ, ಮುನಿಯನ್ ತಾಂಡಾ, ಗಜೇಂದ್ರಗಡ ತಾಲೂಕಿನ ಜನತಾಪ್ಲಾಟ್ ತಾಂಡಾ, ಗಜೇಂದ್ರಗಡ ತಾಂಡಾ ಹಾಗೂ ಹಾಲಭಾವಿ ತಾಂಡಾ ಸೇರಿದಂತೆ ಜಿಲ್ಲೆಯ ವಿವಿಧ ತಾಂಡಾಗಳ ಸಾವಿರಾರು ಜನರು ಆಗಮಿಸಿ ಧರಣಿಯಲ್ಲಿ ಪಾಲ್ಗೊಂಡರು.

ಧರಣಿಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಶಾಸಕ ಹಾಗೂ ತಾಂಡಾ ನಿಗಮದ ಮಾಜಿ ಅಧ್ಯಕ್ಷ ಬಸವರಾಜ ನಾಯ್ಕ, ಹಿಂದಿನ ಬಿಜೆಪಿ ಸರ್ಕಾರ ಕೊಲಂಬೊ ಸಮುದಾಯಗಳಿಗೆ ಶೇ. 4.5ರಷ್ಟು ಮೀಸಲಾತಿ ನೀಡಲು ಆದೇಶ ಮಾಡಿತ್ತು. ಅದನ್ನು ನಮ್ಮ ಜನಾಂಗ ಒಪ್ಪಿರಲಿಲ್ಲ. ಆದರೆ ಇಂದಿನ ಕಾಂಗ್ರೆಸ್ ಸರ್ಕಾರ 63 ಸಮುದಾಯಗಳಿಗೆ ಕೇವಲ ಶೇ.5ರಷ್ಟು ನೀಡಿದ್ದು, ಬಂಜಾರ ಜನಾಂಗಕ್ಕೆ ದ್ರೋಹ ಮಾಡಿದೆ. ಈ ಸರ್ಕಾರಕ್ಕೆ ನಮ್ಮ ಸಮುದಾಯ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸುತ್ತದೆ ಎಂದು ಹೇಳಿದರು. ಕಾಂಗ್ರೆಸ್ ಸರ್ಕಾರದ ನೀತಿಗಳಿಂದ ನಮ್ಮ ಸಮುದಾಯವನ್ನು 50 ವರ್ಷ ಹಿಂದಕ್ಕೊಯ್ದು ನಮ್ಮ ಹಳೆಯ ಕಸಬುಗಳಿಗೆ ಹಚ್ಚುವ ಕುತಂತ್ರ ಮಾಡುತ್ತಿದೆ. ಕೆಲ ಸಮುದಾಯಗಳಿಗೆ ಶೇ.10ರಿಂದ 12ರಷ್ಟು ಹೆಚ್ಚಳ ನೀಡಿರುವ ಹಿಂದಿನ ಮರ್ಮವನ್ನು ನಾಗಮೋಹನದಾಸ್ ಅವರು ಬಹಿರಂಗಪಡಿಸಬೇಕು. ಕೆಲವು ಸಮುದಾಯಗಳನ್ನು ಓಲೈಕೆ ಮಾಡುವ ಉದ್ದೇಶದಿಂದಲೇ ಈ ಒಳಮೀಸಲಾತಿಯನ್ನು ಜಾರಿಗೆ ತಂದಿದ್ದು, ಇಂತಹ ಅವೈಜ್ಞಾನಿಕ ಕ್ರಮವನ್ನು ಕೂಡಲೇ ಕೈಬಿಡಬೇಕು ಎಂದು ಒತ್ತಾಯಿಸಿದರು.

ಪ್ರಥಮ ಹೆಜ್ಜೆ ದಿನಪತ್ರಿಕೆಯ ಸಂಪಾದಕ ಮಂಜ್ಯಾ ನಾಯ್ಕ ಮಾತನಾಡಿ, ಆಯೋಗ ಸಿದ್ಧಪಡಿಸಿದ ಕೋಷ್ಟಕದ ಪ್ರಕಾರ, 'ಡಿ' ಗುಂಪಿನಲ್ಲಿರುವ ಲಂಬಾಣಿ ಹಾಗೂ ಇತರೆ ಸಮುದಾಯಗಳು 23 ಮಾನದಂಡಗಳಲ್ಲಿ ಕೇವಲ 6 ವಿಷಯಗಳಲ್ಲಿ ಮಾತ್ರ ತುಸು ಮುಂದಿದ್ದು, ಉಳಿದ 17 ವಿಷಯಗಳಲ್ಲಿ 'ಸಿ' ಗುಂಪಿಗಿಂತ ಹಿಂದುಳಿದಿವೆ. ಹೀಗಿರುವಾಗ 'ಡಿ' ಗುಂಪಿಗೆ 'ಸಿ' ಗುಂಪಿಗಿಂತ ಕಡಿಮೆ ಶೇಕಡಾವಾರು ಮೀಸಲಾತಿ ನೀಡಿರುವುದು ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿದೆ ಎಂದು ಹೇಳಿದರು.

ಪ್ರತಿಭಟನಾ ಧರಣಿಯಲ್ಲಿ ಸುರೇಶ್ ಬಳೂಟಗಿ, ಚಂದು ನಾಯ್ಕ, ಚಂದ್ರು ನಾಯ್ಕ, ಶಿವಪ್ಪ ನಾಯ್ಕ, ಪುರಪ್ಪ ನಾಯ್ಕ, ಶಿವು ನಾಯ್ಕ, ಕುಬೇರ ನಾಯ್ಕ, ಟಿಕೂ ನಾಯ್ಕ, ಐ.ಎಸ್. ಪೂಜಾರ, ಕುಬೇರಪ್ಪ ರಾಠೋಡ, ಶಿವಣ್ಣ ಲಮಾಣಿ, ಪರಮೇಶ ಲಮಾಣಿ, ಟಿ.ಡಿ. ಪೂಜಾರ, ಪರಮೇಶ ನಾಯ್ಕ, ಧನ್ನುರಾಮ ತಂಬೂರಿ, ಸುರೇಶ್ ಮಹಾರಾಜ, ತುಕಾರಾಮ ಲಮಾಣಿ, ಪರಶುರಾಮ ಚವ್ಹಾಣ, ವಿಠ್ಠಲ ತೋಟದ, ಮೋಹನ ಲಮಾಣಿ ಸೇರಿದಂತೆ ಸಮಾಜದ ಮುಖಂಡರು ಹಾಗೂ ಯುವಕರು ಭಾಗವಹಿಸಿದ್ದರು.

## ಬೆಲೆ ಕುಸಿತ: ಫಸಲಿಗೆ ಬಂದ ಈರುಳ್ಳಿಯನ್ನು ಮಣ್ಣಲ್ಲಿ ಮುಚ್ಚಿದ ರೈತ!

**■ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ**

ಪಾಪ ಸಾಲಸೋಲ ಮಾಡಿ ರೈತ ಬೆಳೆದ ಬೆಳೆಗೆ ಸೂಕ್ತ ಬೆಲೆ ಸಿಗದಿದ್ದರೆ ಅವನ ಪಾಡೇನು.. ಅವನ ಗೋಳು ಕೇಳುವವರು ಯಾರೂ?

ಅದರಂತೆ ಈರುಳ್ಳಿ ಬೆಲೆ ಕುಸಿತ ಹಿನ್ನೆಲೆಯಲ್ಲಿ ಇಲ್ಲೊಬ್ಬ ರೈತ ಫಸಲಿಗೆ ಬಂದ ಈರುಳ್ಳಿ ಬೆಳೆಯನ್ನು ಮಣ್ಣಲ್ಲಿ ಮುಚ್ಚಿದ್ದಾರೆ. ಬೀಳಗಿ ತಾಲೂಕಿನ ಮನ್ನಿಕೇರಿ ಗ್ರಾಮದ ಗುರಲಿಂಗಪ್ಪ ಗಡ್ಡಿ ನಾಲ್ಕು ಎಕರೆಯಲ್ಲಿ ಈರುಳ್ಳಿ ಬೆಳೆದಿದ್ದರು. ಈರುಳಿ ಉತ್ತಮ ಫಸಲು ಬಂದಿದ್ದರೂ ಮಾರುಕಟ್ಟೆಯಲ್ಲಿ ಬೆಲೆ ಇಲ್ಲ ಎಂದು ಬೇಸರಗೊಂಡಿದ್ದರು. ಸಾಲ ಮಾಡಿ ಈರುಳ್ಳಿ ಬೆಳೆದಿದ್ದೇನೆ. ಉತ್ತಮ ಫಸಲು ಬಂದರೂ ಮಾರುಕಟ್ಟೆಯಲ್ಲಿ ಬೆಲೆ ಇಲ್ಲ. ಒಂದು ಕ್ವಿಂಟಾಲ್ ಈರುಳ್ಳಿಗೆ 200 ರೂ. ಅಥವಾ 300 ರೂ. ಹೇಳುತ್ತಾರೆ. ಬೆಲೆ ಇಲ್ಲದ್ದಕ್ಕೆ ಈರುಳ್ಳಿಯನ್ನು ಮಣ್ಣಲ್ಲೇ ಮುಚ್ಚುತ್ತಿದ್ದೇನೆ ಎಂದು ಹೇಳಿದ್ದಾರೆ. ಮೊದಲೇ ಅತೀವೃಷ್ಟಿಯಿಂದ ಬೆಳೆ ಹಾಳಾಗಿತ್ತು. ಈಗ ಅಳಿದುಳಿದ ಫಸಲು ಬಂದಿದೆ. ಆದರೆ ಉತ್ತಮ ದರ ಸಿಗುತ್ತಿಲ್ಲ. ಹೀಗಾದರೆ ರೈತ ಹೇಗೆ ಬದುಕಬೇಕು? ಈರುಳ್ಳಿ ಬೆಳೆದ ರೈತರಿಗೆ ಸರ್ಕಾರ ಪರಿಹಾರ ಘೋಷಣೆ ಮಾಡಲಿ ಎಂದು ಆಗ್ರಹಿಸಿದರು.

## ನ್ಯಾಯಮೂರ್ತಿಗಳ ಮೇಲೆ ಶೂ ಎಸೆದ ಪ್ರಕರಣ ಕ್ರಮ ಕೈಗೊಳ್ಳುವಂತೆ ರಾಷ್ಟ್ರಪತಿಗಳಿಗೆ ಮನವಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯ ಮೂರ್ತಿಗಳಾದ ಬಿ.ಆರ್. ಗವಾಯಿ ಅವರ ಮೇಲೆ ಶೂ ಎಸೆದು ಹೀನ ಕೃತ್ಯ ಎಸಗಿದವರ ಮೇಲೆ ಉಗ್ರ ಕ್ರಮ ಕೈಗೊಳ್ಳುವಂತೆ ಗದಗ ಜಿಲ್ಲಾ ವಕೀಲರ ಸಂಘದ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು. ಸಂಘದ ಅಧ್ಯಕ್ಷರಾದ ಆರ್ ಜಿ. ಕಲ್ಲೂರ ಮಾತನಾಡಿ, ಅ.6ರಂದು ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಬಿ.ಆರ್. ಗವಾಯಿ ಇವರ ಮೇಲೆ ರಾಕೇಶ ಕಿಶೋರ ಎಂಬ ವಕೀಲರು ಶೂ ಎಸೆಯಲು ಪ್ರಯತ್ನಿಸಿರುವುದು ನಿಜಕ್ಕೂ ಕಳವಳಕಾರಿ ಮತ್ತು ಖಂಡನೀಯ ವಿಚಾರ. ಇದನ್ನು ಗದಗ ಜಿಲ್ಲಾ ವಕೀಲರ ಸಂಘವು ಉಗ್ರವಾಗಿ ಖಂಡಿಸುತ್ತದೆ. ಇಂತಹ ಹೀನ ಕೃತ್ಯ ಎಸಗಿದವರ ವಿರುದ್ಧ ಶೀಘ್ರವಾಗಿ ಉಗ್ರ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಎಮ್.ಎನ್. ನಾಯ್ಕರ, ಉಪಾಧ್ಯಕ್ಷರಾದ ಎಂ.ಎ. ಸಂಗನಾಳ, ವಕೀಲರಾದ ಮೋಹನ ಭಜಂತ್ರಿ, ಶ್ರೀಕಾಂತ ದೊಡ್ಡಮನಿ, ಸಿ.ಆರ್. ವಡಕಣ್ಣವರ, ಜಿ.ಪಿ. ಪವಾರ, ಶೈಲಾ ಹಿರೇಮಠ, ವಿಲಾಸ ಕೊಪ್ಪಳ, ವಾಯ್.ಡಿ. ತಳವಾರ, ಎಂ.ಎ. ಮೌಲ್ವಿ, ಎಸ್.ಎಫ್. ದೊಡ್ಡಮನಿ, ಎನ್.ಬಿ. ಬಿಚ್ಚಗತ್ತಿ ಸೇರಿದಂತೆ ಗದಗ ಜಿಲ್ಲೆಯ ವಕೀಲರ ಸಂಘದ ಸದಸ್ಯರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಚರಂಡಿಯಂತಾದ ಅತ್ತಿಮಬ್ಬೆ ಮಹಾದ್ವಾರ



> ಅಗಳತ ಕೆರೆಯಲ್ಲಿಯ ಚರಂಡಿ ನೀರನ್ನು ಗ್ರಾ.ಪಂ ಸದಸ್ಯರ ಗಮನಕ್ಕೆ ತರದೇ ಗ್ರಾ.ಪಂ ಅಧಿಕಾರಿಗಳು ಅವೈಜ್ಞಾನಿಕವಾಗಿರುವ ಒಳಚರಂಡಿಗೆ ಹರಿಸಿದ್ದರಿಂದ ಅತ್ತಿಮಬ್ಬೆ ಮಹಾದ್ವಾರವು ಗಬ್ಬೆದ್ದು ನಾರುತ್ತಿದೆ. ಈ ಬಗ್ಗೆ ನಾಳೆಯೇ ತುರ್ತು ಸಭೆ ಕರೆದು ಚರ್ಚಿಸಬೇಕು.
>
> **- ವಿರೂಪಾಕ್ಷಿ ಬೆಟಗೇರಿ.**
> ಗ್ರಾ.ಪಂ ಸದಸ್ಯರು.

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

101 ಗುಡಿ, 101 ಬಾವಿಗಳನ್ನು ಹೊಂದಿರುವ ಲಕ್ಕುಂಡಿಯ ಪ್ರವೇಶದ್ವಾರವಾಗಿರುವ ದಾನ ಚಿಂತಾಮಣಿ ಅತ್ತಿಮಬ್ಬೆ ಮಹಾದ್ವಾರವು ದಿನಕ್ಕೊಂದು ಅವಾಂತರಕ್ಕೆ ಕಾರಣವಾಗುತ್ತಿದೆ.

ಮೊನ್ನೆ ಮಹಾದ್ವಾರದ ಮುಂದೆ ವಾಮಾಚಾರ ನಡೆಸಿ ಮಹಾದ್ವಾರದ ಹೆಸರಿಗೆ ಮಸಿ ಹಚ್ಚುವ ಕೆಲಸ ಮಾಡಿದ್ದು ಇನ್ನೂ ಹಸಿರಾಗಿರುವಾಗಲೇ ಚರಂಡಿಯಿಂದ ತುಂಬಿರುವ ಅಗಳತ ಕೆರೆಯ ನೀರನ್ನು ಅವೈಜ್ಞಾನಿಕವಾಗಿರುವ ಒಳ ಚರಂಡಿಗೆ ಹರಿಬಿಟ್ಟಿದ್ದರಿಂದ ಚೇಂಬರ್ ಮೂಲಕ ಹೊರ ಬಂದು ಮಹಾದ್ವಾರದ ಮುಂದೆ ಸಂಗ್ರಹವಾಗಿ ಗಬ್ಬು ವಾಸನೆ ಬೀರುತ್ತಿದೆ.

ಗ್ರಾಮದ ಓಣಿಯಲ್ಲಿ ಚರಂಡಿ ನೀರಿನಿಂದಲೇ ತುಂಬಿರುವ ಅಗಳತ ಕೆರೆ ತುಂಬಿದ್ದರಿಂದ ಅವೈಜ್ಞಾನಿಕವಾಗಿ ಗ್ರಾಮ ಪಂಚಾಯತಿಯು ಯುಜಿಡಿ ಮೂಲಕ ಹರಿಸಿತು. ಆದರೆ ಕಳೆದ 10 ವರ್ಷಗಳ ಹಿಂದೆ ನಿರ್ಮಾಣವಾಗಿರುವ ಒಳಚರಂಡಿಯು ದುರಸ್ತಿಯಿರುವುದರಿಂದ ಚೇಂಬರ್ ಮೂಲಕ ಚರಂಡಿ ನೀರು ಹೊರಬಂದು ಮಹಾದ್ವಾರದಲ್ಲಿ ಸಂಗ್ರಹವಾಗಿ ಗಬ್ಬೆದ್ದು ನಾರುತ್ತಿದೆ. ಮುಂದಾಲೋಚನೆ ಇಲ್ಲದೇ ಇಂತಹ ಅವ್ಯವಸ್ಥೆಗೆ ಕಾರಣವಾಗಿರುವ ಗ್ರಾ.ಪಂ ನಿರ್ಧಾರಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇಂತಹ ಹೊಲಸು ನೀರು ಗ್ರಾಮದ ಹೊರ ಭಾಗದಲ್ಲಿರುವ ಜಮೀನಿಗೆ ನುಗ್ಗುವುದರಿಂದ ಬೆಳೆಯೂ ನಾಶವಾಗುತ್ತಿದ್ದು, ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ನೀರು ಸರಾಗವಾಗಿ ಹೋಗಲು ಗಟಾರು ಇಲ್ಲ. ಈ ಕುರಿತು ಹಲವಾರು ಬಾರಿ ಗ್ರಾಮ ಪಂಚಾಯಿತಿ ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದರೂ ಕಾಳಜಿ ವಹಿಸದೇ ಇರುವುದಕ್ಕೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಸತ್ಯಮ್ಮದೇವಿ ಜಾತ್ರಾ ಮಹೋತ್ಸವ



**■ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿ ತಾಲೂಕಿನ ಹಾರೋಗೇರಿ ಗ್ರಾಮದಲ್ಲಿ ಸತ್ಯಮ್ಮದೇವಿ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಜರುಗಿತು. ಜಾತ್ರಾ ಮಹೋತ್ಸವದ ಅಂಗವಾಗಿ ಸತ್ಯಮ್ಮದೇವಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು.

ಹಾರೋಗೇರಿ ಸೇರಿ ಸುತ್ತಮುತ್ತಲಿನ ಗ್ರಾಮಸ್ಥರು ದೇವಿಯ ದರ್ಶನಾಶೀರ್ವಾದ ಪಡೆದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಕಲಾವಿದೆ ಸುಮಂಗಲಾ ಪೂಜಾರ ಅವರಿಂದ ಸುಗಮ ಸಂಗೀತ ಕಾರ್ಯಕ್ರಮ ಹಾಗೂ ಶ್ರೀ ಸತ್ಯಮ್ಮದೇವಿ ಬಯಲಾಟ ಸಂಘದಿಂದ ರಕ್ತರಾತ್ರಿ ಅರ್ಥಾತ್ ವೀರ ಅಶ್ವತ್ಥಾಮ ಸಾಮಾಜಿಕ ನಾಟಕ ಪ್ರದರ್ಶನಗೊಂಡಿತು.

## ಕರಾಟೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಪದವಿಪೂರ್ವ ಕಾಲೇಜಿನ ಕ್ರೀಡಾಕೂಟದಲ್ಲಿ ಭಾಗವಹಿಸಿದ ಮನೋರಮಾ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿ ಕರಾಟೆ ಸ್ಪರ್ಧೆಯಲ್ಲಿ ಕಿರಣಕುಮಾರ ಕೊಟ್ಟೂರಶೆಟ್ಟರ್ ಭಾಗವಹಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಸಾಧಕ ವಿದ್ಯಾರ್ಥಿಗೆ ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಕಾರ್ಯದರ್ಶಿ ಮಂಜುನಾಥ ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ಖಜಾಂಚಿ ಸಂಜಯ ಕುಡತರಕರ, ನಿರ್ದೇಶಕ ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಶಾಹೀದಾ ಶಿರಹಟ್ಟಿ, ದೈಹಿಕ ಉಪನ್ಯಾ ಸಕ ಖಯುಮ ನವಲೂರ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ಉದ್ಯೋಗ ಖಾತ್ರಿ ಜಾಬ್ ಕಾರ್ಡ್‌ಗೆ ಸ್ಥಳದಲ್ಲಿಯೇ ಇ-ಕೆವೈಸಿ

## ಪ್ರಕ್ರಿಯೆಯನ್ನು ತಕ್ಷಣ ಪೂರ್ಣಗೊಳಿಸಿ



> ಲಕ್ಷ್ಮೇಶ್ವರ ತಾಲೂಕಿನ ಒಟ್ಟು 14 ಗ್ರಾ.ಪಂಗಳಲ್ಲಿ 18146 ಕುಟುಂಬಗಳಿದ್ದು, 41544 ನೋಂದಣಿಯಾದ ಕೂಲಿಕಾರರು ಇದ್ದಾರೆ.
>
> ಅದರಲ್ಲಿ 29136 ಸಕ್ರಿಯ ಕೂಲಿಕಾರರು ಇರುತ್ತಾರೆ. ಇವರೆಲ್ಲರೂ ಇ-ಕೆವೈಸಿ ಮಾಡಿಕೊಳ್ಳಲು ತಿಳಿಸಲಾಗಿದೆ. ತಾಲೂಕಿನಲ್ಲಿ ಸಾಮೂಹಿಕ ಹಾಗೂ ವೈಯಕ್ತಿಕ ಕಾಮಗಾರಿಗಳ ಮೂಲಕ ಕೂಲಿಕಾರರಿಗೆ 100 ದಿನಗಳ ಕನಿಷ್ಠ ಉದ್ಯೋಗ ಒದಗಿಸಲಾಗುತ್ತಿದ್ದು, ಸರ್ಕಾರದ ಈ ಮಹತ್ವಾಕಾಂಕ್ಷಿ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಎಲ್ಲಾ ಕಾರ್ಮಿಕರು ತಕ್ಷಣ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕು.
>
> **- ಕೃಷ್ಣಪ್ಪ ಧರ್ಮರ.**
> ತಾ.ಪಂ ಇಓ, ಲಕ್ಷ್ಮೇಶ್ವರ.

> ಇ-ಕೆವೈಸಿ ಸಂಬಂಧವಾಗಿ ತಾಲೂಕಿನ ಎಲ್ಲಾ ಗ್ರಾ.ಪಂಗಳಲ್ಲಿ ಸ್ವಚ್ಛತಾ ವಾಹಿನಿ, ಡಂಗೂರ ಸಾರುವ ಮೂಲಕ ಪ್ರಚಾರಪಡಿಸಲಾಗಿದೆ. ಎಲ್ಲಾ ಕೂಲಿಕಾರ್ಮಿಕರು ಗ್ರಾಮ ಪಂಚಾಯಿತಿಗೆ ತೆರಳಿ ಸಿಬ್ಬಂದಿರವರನ್ನು ಸಂಪರ್ಕಿಸಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು.
>
> **- ಮಂಜುನಾಥ್‌ಸ್ವಾಮಿ ಹೆಚ್.ಎಂ.**
> ತಾಲೂಕು ಐಇಸಿ ಸಂಯೋಜಕರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ಅಡಿಯಲ್ಲಿ ಕೆಲಸ ಮಾಡುತ್ತಿರುವ ತಾಲೂಕಿನ ನರೇಗಾ ಕೂಲಿಕಾರರು ಇ-ಕೆವೈಸಿ ಪ್ರಕ್ರಿಯೆ ಕಡ್ಡಾಯಗೊಳಿಸಿದ್ದು, 14 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಜಾಬ್‌ಕಾರ್ಡ್ ಹೊಂದಿರುವ ಕೂಲಿಕಾರರು ತಮ್ಮ ಇ-ಕೆವೈಸಿ ಪ್ರಕ್ರಿಯೆಯನ್ನು ತಕ್ಷಣ ಪೂರ್ಣಗೊಳಿಸಬೇಕೆಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಧರ್ಮರ ಕೃಷ್ಣಪ್ಪ ಕರೆ ನೀಡಿದ್ದಾರೆ.

ಅವರು ನರೇಗಾ ಕೂಲಿಕಾರ್ಮಿಕರ ಜಾಬ್ ಕಾರ್ಡಗೆ ಸ್ಥಳದಲ್ಲಿಯೇ ಇ-ಕೈವೈಸಿ ಮಾಡುವ ಕಾರ್ಯದ ಮಾಹಿತಿ ನೀಡಿ ಮಾತನಾಡಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ಬಂದ ಸೂಚನೆಯ ಮೇರೆಗೆ ಸೆಪ್ಟಂಬರ್ 30ರೊಳಗಾಗಿ ಎನ್‌ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ಇ-ಕೆವೈಸಿ ಪ್ರಕ್ರಿಯೆ ಕಡ್ಡಾಯವಾಗಿದೆ. ಆದರೆ ಲಕ್ಷ್ಮೇಶ್ವರ ತಾಲೂಕಿನಲ್ಲಿ ಇನ್ನೂ ಹೆಚ್ಚಿನ ಕೂಲಿಕಾರರು ಈ ಪ್ರಕ್ರಿಯೆ ಪೂರ್ಣಗೊಳಿಸದಿರುವುದರಿಂದ ತಾಲೂಕು ಪಂಚಾಯಿತಿಯ ಐಇಸಿ ಚಟುವಟಿಕೆಗಳ ಮೂಲಕ ವ್ಯಾಪಕ ಜಾಗೃತಿ ಕಾರ್ಯಕ್ರಮಗಳು ಹಮ್ಮಿಕೊಳ್ಳಲು ಸೂಚಿಸಲಾಗಿದೆ. ಅಕ್ಟೋಬರ್ 20ರರೊಳಗಾಗಿ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಬೇಕಾಗಿದೆ ಎಂದರು.

ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಿದರೆ ಕೂಲಿ ಪಾವತಿಯಲ್ಲಿ ವೇಗ ಮತ್ತು ಪಾರದರ್ಶಕತೆ ಹೆಚ್ಚುತ್ತದೆ. ಜೊತೆಗೆ ಕಾರ್ಮಿಕರ ಹಾಜರಾತಿಯನ್ನು ಮುಖ ಆಧಾರಿತ ತಂತ್ರಾಂಶದ ಮೂಲಕ ಎನ್‌ಎಂಎಂಎಸ್ ಅಪ್ಲಿಕೇಶನ್‌ನಲ್ಲಿ ನಿಖರವಾಗಿ ದಾಖಲಿಸಬಹುದು.

ಇದು ನರೇಗಾ ಯೋಜನೆಯ ವಿಶ್ವಾಸಾರ್ಹತೆ ಮತ್ತು ಪರಿಣಾಮಕಾರಿತೆಯನ್ನು ಹೆಚ್ಚಿಸುತ್ತದೆ. ಸದ್ಯದಲ್ಲೇ ಎನ್‌ಎಂಎಂಎಸ್ ಅಪ್ಲಿಕೇಶನ್‌ನಲ್ಲಿ ಕಾರ್ಮಿಕರ ಫೋಟೋ ಸೆರೆಹಿಡಿದು ಆಧಾರ್ ಸಂಖ್ಯೆಯೊಂದಿಗೆ ಮುಖ ಹೊಂದಾಣಿಕೆ ಮೂಲಕ ಹಾಜರಾತಿ ದೃಢಪಡಿಸಲಾಗುತ್ತಿದೆ. ಇ-ಕೆವೈಸಿ ಪೂರ್ಣಗೊಳಿಸದ ಕಾರ್ಮಿಕರ ಹಾಜರಾತಿಯನ್ನು ಮುಂದಿನ ದಿನಗಳಲ್ಲಿ ಪರಿಗಣಿಸಲಾಗುವುದಿಲ್ಲ ಎಂದು ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದರು.

## ದೇಗುಲದ ಹುಂಡಿ ಕದ್ದು ಹಣ ಎಣಿಸುವ ವೇಳೆ ಸಿಕ್ಕಿಬಿದ್ದ ಕಳ್ಳರು!

**■ವಿಜಯಸಾಕ್ಷಿ ಸುದ್ದಿ, ಮಂಡ್ಯ**

ದೇಗುಲದ ಹುಂಡಿ ಕದ್ದು ಹಣ ಎಣಿಸುವ ವೇಳೆ ಖದೀಮರು ಸಿಕ್ಕಿ ಬಿದ್ದಿರುವ ಘಟನೆ ಮಂಡ್ಯ ತಾಲೂಕಿನ ಮಾಂಡವ್ಯ ಕಾಲೇಜಿನ ಬಳಿ ನಡೆದಿದೆ. ಸಿಕ್ಕಿಬಿದ್ದ ನಾಲ್ವರು ಯುವಕರು ಮಂಡ್ಯ ತಾಲೂಕಿನ ಬೂದನೂರು ಗ್ರಾಮದವರೆಂದು ತಿಳಿದು ಬಂದಿದೆ.

ಕದ್ದ ಹುಂಡಿ ಹಣ ಹಂಚಿಕೆ ವಿಷಯವಾಗಿ ಕದ್ದವರಲ್ಲೇ ಗದ್ದಲ, ಗಲಾಟೆ ನಡೆಯುತ್ತಿತ್ತು. ಈ ವೇಳೆ ಸಾರ್ವಜನಿಕರಿಂದ ಪೊಲೀಸರಿಗೆ ಮಾಹಿತಿ ನೀಡಲಾಯಿತು. ಕೂಡಲೇ ಸ್ಥಳಕ್ಕೆ ಬಂದ ಪೊಲೀಸರು ಯುವಕರನ್ನು ವಶಕ್ಕೆ ಪಡೆದಿದ್ದಾರೆ.

ವಿಚಾರಣೆ ವೇಳೆ ದೇಗಲದ ಹುಂಡಿ ಕದ್ದಿರೋ ವಿಚಾರ ಖದೀಮರ ಗ್ಯಾಂಗ್ ಬಾಯ್ಬಿಟ್ಟಿದ್ದಾರೆ. ಸದ್ಯ ಮಂಡ್ಯ ಗ್ರಾಮಾಂತರ ಪೊಲೀಸರು ಬಂಧಿತರನ್ನು ವಶಕ್ಕೆ ಪಡೆದು ಠಾಣೆಗೆ ಕರೆದೊಯ್ದಿದ್ದು, ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.



ನಗರದ ಮನೋರಮಾ ಕಾಲೇಜಿನಲ್ಲಿ ಆದಿಕವಿ ವಾಲ್ಮೀಕಿ ಮಹರ್ಷಿ ಜಯಂತಿಯನ್ನು ಆಚರಿಸಲಾಯಿತು. ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತಾಧಿಕಾಗಳಾದ ಕಿಶೋರ ಮುದಗಲ್ಲ, ಸಂಯೋಜಕರುಗಳಾದ ಪ್ರೊ. ಸವಿತಾ ಪೂಜಾರ, ಪ್ರೊ. ಪ್ರಿಯಾಂಕಾ ಕಬಾಡಿ, ಪ್ರೊ. ಯಶವಂತ ಹಾಗೂ ಉಪನ್ಯಾಸಕ ವೃಂದದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka